ಸಂಪುಟ: 06 ಸಂಚಿಕೆ: 119 ಪುಟಗಳು: 08 ಭಾನುವಾರ 12 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಾವೇನು ಹೊಂದಿದ್ದೇವೆಯೋ ಅದರಲ್ಲಿಯೇ ಸಂತೋಷಪಡುವುದು ದೊಡ್ಡ ಸಂಗತಿ, ನಮಗೆ ಬೇಕಾದ್ದನ್ನು ಪ್ರಾಮಾಣಿಕ ಪ್ರಯತ್ನದಿಂದ ಪಡೆಯುವುದು ಮತ್ತೂ ಹೆಚ್ಚಿನದು!

# ವ್ಯಾಪಾರ ವೃದ್ಧಿ ಉಭಯ ರಾಷ್ಟ್ರಗಳ ಸಮೃದ್ಧಿ

**ಮೂರು ರಾಷ್ಟ್ರಗಳ ಪ್ರವಾಸದಲ್ಲಿರುವ ಪ್ರಧಾನಿ ದಿ ಸದ್ಯ ನ್ಯೂಜಿಲೆಂಡ್‌ನಲ್ಲಿದ್ದು, ಕೆಲವೇ ಕ್ಷಣಗಳಲ್ಲಿ ಆಕ್ಲೆಂಡ್‌ನಲ್ಲಿ ನಡೆಯಲಿರುವ ಭಾರತೀಯ ಸಮುದಾಯದವರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅವರ ಜತೆ ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಸಹ ಉಪಸ್ಥಿತರಿರಲಿದ್ದಾರೆ. ಆಕ್ಲೆಂಡ್‌ನಲ್ಲಿ ಭಾರತೀಯ ಸಮುದಾಯದವರೂ ಸೇರಿದಂತೆ ಪ್ರಧಾನಿ ಮೋದಿ ಸ್ವಾಗತಕ್ಕೆ ಸಾವಿರಾರು ಜನ ಸೇರಿದ್ದಾರೆ. 40 ವರ್ಷಗಳ ಬಳಿಕ ಭಾರತದ ಪ್ರಧಾನಿಯೊಬ್ಬರು ನ್ಯೂಜಿಲೆಂಡ್‌ಗೆ ನೀಡಿರುವ ಭೇಟಿ ಇದಾಗಿದ್ದು, ಐತಿಹಾಸಿಕ ಮಹತ್ವ ಪಡೆದಿದೆ. ಕಮ್ಯೂನಿಟಿ ಇವೆಂಟ್‌ಗೂ ಮುನ್ನ ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಜತೆ ದ್ವಿಪಕ್ಷೀಯ ಮಾತುಕತೆ ನಡೆಸಿರುವ ಮೋದಿ, ಉಭಯ ದೇಶಗಳ ಬಾಂಧವ್ಯ ವೃದ್ಧಿ ನಿಟ್ಟಿನಲ್ಲಿ ಮಹತ್ವದ ಕರೆ ನೀಡಿದ್ದಾರೆ. 2030ರ ವೇಳೆಗೆ ಉಭಯ ದೇಶಗಳ ನಡುವೆ 35,000 ಕೋಟಿ ರೂ. ದ್ವಿಪಕ್ಷೀಯ ವ್ಯಾಪಾರದ ಗುರಿ ಹೊಂದಲಾಗಿದೆ ಎಂದು ಉಭಯ ನಾಯಕರು ಜಂಟಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.**

• ಉದಯವಾಹಿನಿ, ಆಕ್ಲೆಂಡ್

ಪ್ರಧಾನಿ ಮೋದಿ ಅವರು ನ್ಯೂಜಿಲ್ಯಾಂಡ್ ಪ್ರವಾಸದಲ್ಲಿದ್ದಾರೆ. ಈ ಸಂದರ್ಭದಲ್ಲಿ. ಕಿವೀಸ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಹಾಗೂ ಮೋದಿ ನಡುವಿನ ಮಾತುಕತೆ ವೇಳೆ ಉಭಯ ರಾಷ್ಟ್ರಗಳು ತಮ್ಮ ಸಂಬಂಧಗಳನ್ನು ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಿವೆ. 2030ರ ವೇಳೆಗೆ ಸರಕು ಮತ್ತು ಸೇವೆಗಳಲ್ಲಿ ವಾರ್ಷಿಕ ದ್ವಿಪಕ್ಷೀಯ ವ್ಯಾಪಾರವನ್ನು ದ್ವಿಗುಣಗೊಳಿಸುವ ಐದು ವರ್ಷಗಳ ಗುರಿಯನ್ನು ಹೊಂದಿವೆ. ಪ್ರಧಾನಿ ಮೋದಿ ಹಾಗೂ ಕ್ರಿಸ್ಟೋಫರ್ ಲಕ್ಸನ್ ನಡುವಿನ ಮಹತ್ವದ ಸಭೆಯು 10 ಒಪ್ಪಂದಗಳನ್ನು ಒಳಗೊಂಡಂತೆ 18 ಕಾಂಕ್ರೀಟ್ ಫಲಿತಾಂಶಗಳಿಗೆ ಸಾಕ್ಷಿಯಾಯಿತು.

**1** ಭಾರತ-ನ್ಯೂಜಿಲ್ಯಾಂಡ್ ಕಾರ್ಯತಂತ್ರದ ಪಾಲುದಾರಿಕೆ ಹೆಚ್ಚಳ
**2** 2030ರ ವೇಳೆಗೆ 35,000 ಕೋಟಿ ವ್ಯಾಪಾರ ಗುರಿ
**3** 10 ಒಪ್ಪಂದಗಳಿಗೆ ಉಭಯ ರಾಷ್ಟ್ರಗಳು ಸಹಿ

ಇದರಲ್ಲಿ ಪ್ರಮುಖವಾಗಿ ಮುಂದಿನ ನಾಲ್ಕು ವರ್ಷಗಳಲ್ಲಿ ಸಂಬಂಧಗಳನ್ನು ವಿಸ್ತರಿಸುವ ಮಾರ್ಗಸೂಚಿ, ಇಂಡೋ-ಪೆಸಿಫಿಕ್ ಕಡಲ ಸಹಕಾರವನ್ನು ಹೆಚ್ಚಿಸುವ ಚೌಕಟ್ಟು ಮತ್ತು ಭಾರತೀಯ ನೌಕಾಪಡೆ ಹಾಗೂ ನ್ಯೂಜಿಲ್ಯಾಂಡ್ ರಕ್ಷಣಾ ಪಡೆಗಳ ನಡುವಿನ ಪರಸ್ಪರ ಲಾಜಿಸ್ಟಿಕ್ಸ್ ಬೆಂಬಲ ಒಪ್ಪಂದಗಳು ಸೇರಿವೆ. ಮೋದಿ ಮತ್ತು ಲಕ್ಸನ್ ಇಂಡೋ-ಪೆಸಿಫಿಕ್ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ಮುಕ್ತ ಮತ್ತು ಸಮೃದ್ಧ ಪ್ರದೇಶಕ್ಕೆ ತಮ್ಮ ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸಿದರು. ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ನಿಯಮ ಆಧಾರಿತ ಅಂತಾರಾಷ್ಟ್ರೀಯ ಕ್ರಮವನ್ನು ಕಾಪಾಡುವ ಮಹತ್ವವನ್ನು ಉಭಯ ನಾಯಕರು ಒತ್ತಿ ಹೇಳಿದರು.

ಅಂತಾರಾಷ್ಟ್ರೀಯ ಕಾನೂನು, ವಿಶೇಷವಾಗಿ 1982ರ ಯುನೈಟೆಡ್ ನೇಷನ್ಸ್ ಲಾ ಆಫ್ ದಿ ಸೀ ಕನ್ವೆನ್ಷನ್‌ಗೆ ಅನುಸಾರವಾಗಿ, ನೌಕಾಯಾನ ಮತ್ತು ಓವರ್‌ಫ್ಲೈಟ್‌ನ ಸ್ವಾತಂತ್ರ್ಯ ಮತ್ತು ಸಮುದ್ರಗಳ ಇತರ ಕಾನೂನುಬದ್ಧ ಬಳಕೆಗಳಿಗೆ ಇಬ್ಬರು ಪ್ರಧಾನ ಮಂತ್ರಿಗಳು ಕರೆ ನೀಡಿದರು. ಇಂಡೋ-ಪೆಸಿಫಿಕ್‌ನಲ್ಲಿ ಸಹಕಾರವನ್ನು ಹೆಚ್ಚಿಸುವತ್ತ ಗಮನಹರಿಸುವ ನಿಟ್ಟಿನಲ್ಲಿ, ಸಹಕಾರ, ಸಮನ್ವಯ ಮತ್ತು ಮಾಹಿತಿ ವಿನಿಮಯವನ್ನು ಬಲಪಡಿಸಲು ಕಡಲ ಭದ್ರತಾ ಸಂವಾದವನ್ನು ಸ್ಥಾಪಿಸಲು ಎರಡೂ ಕಡೆಯವರು ಒಪ್ಪಿಕೊಂಡರು.

ವಿವಿಧ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಗುರಿ ಹೊಂದಿರುವ ಹಲವಾರು ಒಪ್ಪಂದಗಳಿಗೆ ಸಹಿ ಹಾಕುವ ಮುನ್ನ ಉಭಯ ನಾಯಕರು ಉನ್ನತ ಮಟ್ಟದ ನಿಯೋಗ ಮಾತುಕತೆಗಳಲ್ಲಿ ಭಾಗವಹಿಸಿದರು. ಪ್ರಧಾನಿ ಮೋದಿ ಅವರ ನ್ಯೂಜಿಲ್ಯಾಂಡ್ ಪ್ರವಾಸವು 40 ವರ್ಷಗಳಲ್ಲಿ ಅಲ್ಲಿಗೆ ಭಾರತೀಯ ಪ್ರಧಾನಿಯೊಬ್ಬರ ಮೊದಲ ಭೇಟಿಯಾಗಿದೆ.

ಭಾರತ ಮತ್ತು ನ್ಯೂಜಿಲ್ಯಾಂಡ್ ನಡುವಿನ ಆಳವಾದ ಸಹಕಾರ, ಎರಡೂ ಕಡಲ ರಾಷ್ಟ್ರಗಳು, ಇಂಡೋ-ಪೆಸಿಫಿಕ್‌ಗೆ ಹೊಸ ಶಕ್ತಿಯನ್ನು ತುಂಬುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಕಿವೀಸ್ ಸಹವರ್ತಿ ಕ್ರಿಸ್ಟೋಫರ್ ಲಕ್ಸನ್ ಅವರೊಂದಿಗಿನ ಮಾತುಕತೆಯ ಸಂದರ್ಭದಲ್ಲಿ ಒತ್ತಿ ಹೇಳಿದರು.

ಚೀನಾದ ಹೆಚ್ಚುತ್ತಿರುವ ದೃಢ ನಿಲುವಿನ ಹಿನ್ನೆಲೆಯಲ್ಲಿ, ಇಂಡೋ-ಪೆಸಿಫಿಕ್‌ನಲ್ಲಿ ಸಹಕಾರವನ್ನು ವಿಸ್ತರಿಸುವತ್ತ ಗಮನಹರಿಸಿದ ಪ್ರಧಾನಿ ಮೋದಿ, ಮೂರು ರಾಷ್ಟ್ರಗಳ ಪ್ರವಾಸದ ಮೂರನೇ ಮತ್ತು ಅಂತಿಮ ಹಂತದಲ್ಲಿ ಆಸ್ಟ್ರೇಲಿಯಾದಿಂದ ನ್ಯೂಜಿಲ್ಯಾಂಡ್‌ಗೆ ಪ್ರಯಾಣ ಬೆಳೆಸಿ ಉಭಯ ನಾಯಕರು ಉನ್ನತ ಮಟ್ಟದ ದ್ವಿಪಕ್ಷೀಯ ವ್ಯಾಪಾರದ ಗುರಿ ಹೊಂದಲಾಗಿದೆ ಎಂದು ಉಭಯ ನಾಯಕರು ಜಂಟಿ ತಿಳಿಸಿದ್ದಾರೆ.



## ಮೂರು ದೇಶಗಳ ಪ್ರವಾಸ

ಪ್ರಧಾನಿ ಮೋದಿ ಆಸ್ಟ್ರೇಲಿಯಾದಲ್ಲಿ ಮೂರು ದಿನಗಳ ಪ್ರವಾಸ ಮುಗಿಸಿ ಆಕ್ಲೆಂಡ್‌ಗೆ ತಲುಪಿದ್ದಾರೆ. ಆಸ್ಟ್ರೇಲಿಯಾದಲ್ಲಿ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ '3ನೇ ಆಸ್ಟ್ರೇಲಿಯಾ-ಭಾರತ ವಾರ್ಷಿಕ ನಾಯಕರ ಶೃಂಗಸಭೆ'ಯಲ್ಲಿ ಭಾಗವಹಿಸಿದ್ದ ಅವರು, ನಾಗರಿಕ ಪರಮಾಣು ಇಂಧನ ಒಪ್ಪಂದ ಮತ್ತು ನೌಕಾ ಸಹಕಾರಕ್ಕೆ ಸಹಿ ಹಾಕಿದ್ದರು. ಅದಕ್ಕೂ ಮುನ್ನ ಇಂಡೋನೇಷ್ಯಾದಲ್ಲಿ ಅಧ್ಯಕ್ಷ ಪ್ರಬೋವೊ ಸುಬ್ಯಾಂಟೊ ಅವರೊಂದಿಗೆ ರಕ್ಷಣೆ ಮತ್ತು ಕಡಲ ಭದ್ರತೆ ಸೇರಿದಂತೆ 14 ಪ್ರಮುಖ ಒಪ್ಪಂದಗಳಿಗೆ ಸಹಿ ಹಾಕಿದ್ದರು. ಪ್ರಧಾನಿ ಮೋದಿ ಅವರ ಈ ಆಕ್ಲೆಂಡ್ ಭೇಟಿಯೊಂದಿಗೆ ಅವರ 6 ದಿನಗಳ ಸುದೀರ್ಘ 3 ರಾಷ್ಟ್ರಗಳ ಪ್ರವಾಸ ಮುಕ್ತಾಯಗೊಳ್ಳಲಿದೆ.

## 18 ಪ್ರಮುಖ ನಿರ್ಧಾರಗಳು, 10 ಒಪ್ಪಂದಗಳು

ಈ ಐತಿಹಾಸಿಕ ಸಭೆಯಲ್ಲಿ ಉಭಯ ದೇಶಗಳ ನಡುವೆ 10 ಮಹತ್ವದ ಒಪ್ಪಂದಗಳು ಸೇರಿದಂತೆ ಒಟ್ಟು 18 ಪ್ರಮುಖ ನಿರ್ಧಾರಗಳನ್ನು ಪ್ರಕಟಿಸಲಾಗಿದೆ. ಇಂಡೋ-ಪೆಸಿಫಿಕ್ ಸಾಮರಸ್ಯ, ನೌಕಾಪಡೆ ಮತ್ತು ನ್ಯೂಜಿಲೆಂಡ್ ರಕ್ಷಣಾ ಪಡೆಗಳ ನಡುವೆ ಪರಸ್ಪರ ಲಾಜಿಸ್ಟಿಕ್ಸ್ ಬೆಂಬಲ ಒಪ್ಪಂದಗಳು ಇದರಲ್ಲಿ ಸೇರಿವೆ. ನಾವು ಪ್ರತಿಯೊಂದು ವಲಯದಲ್ಲೂ ಸ್ಪಷ್ಟ ಗುರಿ ಮತ್ತು ಫಲಿತಾಂಶಗಳೊಂದಿಗೆ ಮುನ್ನಡೆಯಲಿದ್ದೇವೆ ಎಂದು ಪ್ರಧಾನಿ ಮೋದಿ ಮಾತುಕತೆಯ ನಂತರ ತಿಳಿಸಿದ್ದಾರೆ.



## ಭಯೋತ್ಪಾದನೆಯ ಬಗ್ಗೆ ಏಕೀಕೃತ ನಿಲುವು

ಎರಡೂ ದೇಶಗಳ ಜಂಟಿ ಹೇಳಿಕೆಯು ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಬಲವಾಗಿ ಖಂಡಿಸಿತು. ನಿರ್ದಿಷ್ಟವಾಗಿ ಹೇಳುವುದಾದರೆ, ಏಪ್ರಿಲ್ 22, 2025ರ ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ನವೆಂಬರ್ 10, 2025 ರಂದು ನವದೆಹಲಿಯ ಕೆಂಪು ಕೋಟೆ ಪ್ರದೇಶದ ಬಳಿ ನಡೆದ ಭಯೋತ್ಪಾದಕ ದಾಳಿ ಬಲವಾಗಿ ಖಂಡಿಸಲಾಯಿತು.

## ಜಾಗತಿಕ ವಿಷಯಗಳ ಕುರಿತು ಚರ್ಚೆ

ಉಭಯ ನಾಯಕರು ಪಶ್ಚಿಮ ಏಷ್ಯಾ (ಮಧ್ಯಪ್ರಾಚ್ಯ) ಸಂಘರ್ಷದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು, ಸ್ಟ್ರೈಟ್ ಆಫ್ ಹಾರ್ಮುಜ್ ಮೂಲಕ ಜಾಗತಿಕ ವಾಣಿಜ್ಯದ ಮುಕ್ತ ಸಂಚಾರಕ್ಕೆ ಯಾವುದೇ ಅಡ್ಡಿ ಇರಬಾರದು ಎಂದು ಒತ್ತಿ ಹೇಳಿದರು. ಇನ್ನು ಉಕ್ರೇನ್ ಯುದ್ಧ ಮತ್ತು ಭಯೋತ್ಪಾದನೆಯ ವಿರುದ್ಧ ಜೀರೋ-ಟಾಲರೆನ್ಸ್ (ಶೂನ್ಯ ಸಹಿಷ್ಣುತೆ) ಧೋರಣೆಯನ್ನು ಇಬ್ಬರೂ ನಾಯಕರು ಪುನರುಚ್ಚರಿಸಿದರು. ಕಳೆದ ವರ್ಷ ಪಹಲ್ಗಾಮ್ ಮತ್ತು ಕೆಂಪುಕೋಟೆಯ ಬಳಿ ನಡೆದ ಭಯೋತ್ಪಾದಕ ದಾಳಿಯನ್ನು ಉಭಯ ನಾಯಕರು ತೀವ್ರವಾಗಿ ಖಂಡಿಸಿದರು. ಜೊತೆಗೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ವಿಸ್ತರಣೆ ಮತ್ತು ಸುಧಾರಣೆಗೆ ಭಾರತದ ಬೇಡಿಕೆಯನ್ನು ನ್ಯೂಜಿಲೆಂಡ್ ಬೆಂಬಲಿಸಿದೆ.

- ದಶಕಗಳ ಬಳಿಕ ನ್ಯೂಜಿಲೆಂಡ್‌ಗೆ ಭಾರತ ಪ್ರಧಾನಿ ಭೇಟಿ
- ಪ್ರಧಾನಿ ಮೋದಿಗೆ ಆತ್ಮೀಯ ಸ್ವಾಗತ
- ಭಾರತಕ್ಕೆ ಮರಳಲಿರುವ ಮೋದಿ

## ತುಂಗಭದ್ರಾ ಜಲಾಶಯದ ಒಳಹರಿವು ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ಜೀವನಾಡಿ ಆಗಿರುವ ತುಂಗಭದ್ರಾ ಜಲಾಶಯನ ಪ್ರದೇಶದಲ್ಲಿ ವ್ಯಾಪಕ ಮಳೆ ಆಗುತ್ತಿರುವುದರಿಂದ ಜಲಾಶಯದ ಒಳ ಹರಿವಿನ ಪ್ರಮಾಣದಲ್ಲಿ ಏರಿಕೆ ಆಗುತ್ತಿದೆ. ತುಂಗಭದ್ರಾ ಜಲಾಶಯಕ್ಕೆ 44,782 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದ ಗರಿಷ್ಠ ನೀರಿನ ಮಟ್ಟ 1,633.00 ಅಡಿ ಇದ್ದು. ನಿನ್ನೆ ಜಲಾಶಯದ ನೀರಿನ ಮಟ್ಟ 1,596.66 ಅಡಿ ತಲುಪಿದೆ. ಜಲಾಶಯದ ನೀರಿನ ಸಂಗ್ರಹ ಮಟ್ಟ 17.511 ಟಿಎಂಸಿಗೆ ಏರಿಕೆ ಆಗಿದೆ. ಜಲಾಶಯದ ಕಾಲುವೆಗಳ ಮೂಲಕ ಮಾತ್ರ 180 ಕ್ಯೂಸೆಕ್ ನೀರು ಹೊರ ಬಿಡಲಾಗುತ್ತಿದೆ. ಕಳೆದ ಮೂರು ದಿನದ ಅವದಿಯಲ್ಲಿ ಜಲಾಶಯದಲ್ಲಿ 4 ಅಡಿ ನೀರು ಹೆಚ್ಚಳವಾಗಿದೆ. ಕಳೆದ ಎರಡು ಮೂರು ದಿನಗಳಿಂದ ಜಲಾಶಯದ ಒಳ ಹರಿವಿನ ಪ್ರಮಾಣ ದಿನದಿಂದ ದಿನಕ್ಕೆ ಏರಿಕೆ ಆಗುತ್ತಿದ್ದು. ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆ ಆಗುತ್ತಿರುವುದರಿಂದ ಒಳ ಹರಿವಿನ ಪ್ರಮಾಣ ಇನ್ನು ಹೆಚ್ಚಳವಾಗಲಿದೆ ಎಂದು ತುಂಗಭದ್ರಾ ಮಂಡಳಿ ಅಧಿಕಾರಿಗಳು ತಿಳಿಸಿದ್ದಾರೆ.

## ಜನಪ್ರತಿನಿಧಿಗಳ ವಿಚಾರಣೆಗೆ ಅನುಮತಿ ಕೋರಿದ್ದ ಅರ್ಜಿಗಳಿಗೆ ಲೋಕಭವನದಲ್ಲಿ ಈಗಲೂ ಮುಕ್ತಿ ಸಿಕ್ಕಿಲ್ಲ

• ಉದಯವಾಹಿನಿ, ಬೆಂಗಳೂರು

ಜನಪ್ರತಿನಿಧಿಗಳ ವಿರುದ್ಧದ ವಿಚಾರಣೆಗೆ ಅನುಮತಿ ಕೋರಿ ರಾಜ್ಯಪಾಲರ ಬಳಿ ಸಲ್ಲಿಸಲಾದ ಅರ್ಜಿಗಳ ಲೋಕಭವನದಲ್ಲಿ ಈಗಲೂ ಮುಕ್ತಿ ಸಿಕ್ಕಿಲ್ಲ. ರಾಜ್ಯಪಾಲರ ಕಚೇರಿಯು ಸಾಮಾನ್ಯವಾಗಿ ಪ್ರಕರಣದ ಸೂಕ್ಷ್ಮತೆಯನ್ನು ಗಮನದಲ್ಲಿಟ್ಟುಕೊಂಡು ಅಥವಾ ತನಿಖಾ ಪ್ರಕ್ರಿಯೆಗೆ ಅಡ್ಡಿಯಾಗಬಹುದು ಎಂಬ ಕಾರಣ ನೀಡಿ (ನಿಯಮ 8(1)( ಹೆಚ್ ) ಅಡಿಯಲ್ಲಿ) ಕೆಲವು ಸಂದರ್ಭಗಳಲ್ಲಿ ಮಾಹಿತಿ ನೀಡಲು ನಿರಾಕರಿಸುತ್ತದೆ. ಹೀಗಾಗಿ, ಬಾಕಿ ಇರುವ ನಿಖರ ಸಂಖ್ಯೆಯನ್ನು ರಾಜ್ಯಪಾಲರ ಕಚೇರಿ ಅಧಿಕೃತವಾಗಿ ಬಹಿರಂಗಪಡಿಸುವುದಿಲ್ಲ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವರಾದ ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ, ಜನಾರ್ದನ ರೆಡ್ಡಿ ಸೇರಿದಂತೆ ಹಲವು ರಾಜಕೀಯ ನಾಯಕರ ವಿರುದ್ಧದ ವಿವಿಧ ದೂರುಗಳು ಲೋಕಾಯುಕ್ತ ಅಥವಾ ಸಂಬಂಧಪಟ್ಟ ತನಿಖಾ ಸಂಸ್ಥೆಗಳ ಹಂತದಲ್ಲಿವೆ.

ಬಿ.ಎಸ್.ಯಡಿಯೂರಪ್ಪ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ವಿರುದ್ಧದ ಪ್ರಾಸಿಕ್ಯೂಷನ್(ವಿಚಾರಣೆ)ಗೆ ಅನುಮತಿ ಕೋರಿ ರಾಜ್ಯಪಾಲರಿಗೆ ಪತ್ರ ಬರೆದಿರುವ ಪ್ರಕರಣವು ಪ್ರಮುಖವಾಗಿ ಬಿಡಿಎ ಟೆಂಡರ್ ಅಕ್ರಮ ಆರೋಪಕ್ಕೆ ಸಂಬಂಧಿಸಿದೆ. 2019-21ರ ಅವಧಿಯಲ್ಲಿ ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಸತಿ ಯೋಜನೆಯೊಂದರ ಟೆಂಡರ್ ಅನ್ನು ರಾಮಲಿಂಗ ಕನ್‌ಸ್ಟ್ರಕ್ಷನ್ ಕಂಪನಿಗೆ ನೀಡಲು ಪ್ರತಿಯಾಗಿ 12 ಕೋಟಿ ರೂಪಾಯಿ ಲಂಚ ಪಡೆದಿದ್ದಾರೆ ಎಂಬುದು ಪ್ರಮುಖ ಆರೋಪ. ಈ ಹಿಂದೆ ಈ ಪ್ರಕರಣದಲ್ಲಿ ಯಡಿಯೂರಪ್ಪ ಅವರ ವಿರುದ್ಧ ತನಿಖೆ ನಡೆಸಲು ಪ್ರಾಸಿಕ್ಯೂಷನ್ ಅನುಮತಿ ಕೋರಿದಾಗ, ಅಂದಿನ ರಾಜ್ಯಪಾಲರು ಅದಕ್ಕೆ ಅನುಮತಿ ನೀಡಿರಲಿಲ್ಲ.

## ಗಾನಕೋಗಿಲೆ ಎಸ್.ಜಾನಕಿ ನಿಧನ; ಸಿಎಂ ಡಿಕೆಶಿ ಸೇರಿ ಸಚಿವರು, ನಾಯಕರಿಂದ ಸಂತಾಪ

• ಉದಯವಾಹಿನಿ, ಬೆಂಗಳೂರು



ಗಾನಕೋಗಿಲೆ ಎಸ್.ಜಾನಕಿ ನಿಧನಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಆದಿಯಾಗಿ ರಾಜ್ಯದ ಸಚಿವರು, ಮುಖಂಡರು ಸಂತಾಪ ವ್ಯಕ್ತಪಡಿಸಿದ್ದಾರೆ. ಸಿಎಂ ಡಿ.ಕೆ.ಶಿವಕುಮಾರ್ ಎಕ್ಸ್ ಪೋಸ್ಟ್ ಮಾಡಿ, ಭಾರತೀಯ ಚಿತ್ರರಂಗದ ಅಪ್ರತಿಮ ಹಿನ್ನೆಲೆ ಗಾಯಕಿ, ಕನ್ನಡ ಚಿತ್ರರಂಗದ ಮೇರುಗಾಯಕಿ, ಗಾನಕೋಗಿಲೆ ಎಸ್. ಜಾನಕಿ ಅವರ ನಿಧನದ ಸುದ್ದಿ ತೀವ್ರ ಆಘಾತವನ್ನುಂಟು ಮಾಡಿದೆ. ತಮ್ಮ ಕಂಠಸಿರಿಯ ಮೂಲಕ ಕೋಟ್ಯಂತರ ಜನರ ಮನೆಮನಗಳಲ್ಲಿ ನೆಲೆಸಿದ್ದ ಬಹುಭಾಷಾ ಗಾಯಕಿ ಜಾನಕಮ್ಮನವರ ನಿಧನದಿಂದ ಸಂಗೀತ ಕ್ಷೇತ್ರದ ಮಹಾನ್ ಸ್ವರಮಾಧುರ್ಯ ಮೌನವಾದಂತಾಗಿದೆ ಎಂದು ಕಂಬನಿ ಮಿಡಿದಿದ್ದಾರೆ.

ಅನೇಕ ಗಾಯಕರನ್ನು ಪ್ರೋತ್ಸಾಯಿಸಿ ಬೆಳೆಸಿದ, ಸರಳತೆಯ ಸಾಕಾರಮೂರ್ತಿ ಜಾನಕಮ್ಮನವರ ಅಪ್ರತಿಮ ಕಂಠಸಿರಿ ಕನ್ನಡ ನಾಡಿನ ಸಾಂಸ್ಕೃತಿಕ ಕ್ಷೇತ್ರದಲ್ಲಿ ಎಂದೆಂದಿಗೂ ಅಮರ. ಭಗವಂತನು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಕುಟುಂಬವರ್ಗ ಮತ್ತು ಅಪಾರ ಅಭಿಮಾನಿಗಳಿಗೆ ಈ ದುಃಖ ಭರಿಸುವ ಶಕ್ತಿ ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ. ಓಂ ಶಾಂತಿ ಎಂದು ಸಂತಾಪಿಸಿದ್ದಾರೆ.

## ಬೀದಿಬದಿ ವ್ಯಾಪಾರಿಗಳಿಗೆ ಮತ್ತೊಂದು ಶಾಕ್?

• ಉದಯವಾಹಿನಿ, ಬೆಂಗಳೂರು

ನಗರದ ಬೀದಿಬದಿ ವ್ಯಾಪಾರಿಗಳಿಗೆ ಒಂದಾದ ಮೇಲೊಂದು ತೊಂದರೆಗಳು ಎದುರಾಗುತ್ತಿದೆ. ಈಗಾಗಲೇ ಬೆಂಗಳೂರಿನ ಫುಟ್‌ಪಾತ್‌ಗಳಿಂದ ವ್ಯಾಪಾರಿಗಳನ್ನು ತೆರವುಗೊಳಿಸುವ ಕಾರ್ಯಾಚರಣೆ ಜೋರಾಗಿದೆ. ಆದರೆ ಈಗ ಜಿಬಿಎ (ಗ್ರೇಟರ್ ಬೆಂಗಳೂರು ಪ್ರಾಧಿಕಾರ) ಪರ್ಯಾಯ ಜಾಗ ನೀಡುವ ಭರವಸೆ ಕೊಟ್ಟಿದ್ದರೂ ಕೂಡ ಒಂದು ಷರತ್ತು ವಿಧಿಸಿದೆ. ಇದು ಬೀದಿಬದಿ ವ್ಯಾಪಾರಿಗಳಿಗೆ ಮತ್ತೊಂದು ದೊಡ್ಡ ಆಘಾತ ನೀಡಿದೆ. ಹೌದು, ಬೀದಿಬದಿ ವ್ಯಾಪಾರಿಗಳಿಗೆ ಪರ್ಯಾಯ ಜಾಗ ಕೊಡುವುದು ಕೇವಲ ಐಡಿ ಕಾರ್ಡ್ ಹೊಂದಿರುವ ವ್ಯಾಪಾರಿಗಳಿಗೆ ಮಾತ್ರ ಎಂದು ತೀರ್ಮಾನಿಸಿದೆ. ಇದರಿಂದಾಗಿ ಐಡಿ ಕಾರ್ಡ್ ಇಲ್ಲದ ಸಾವಿರಾರು ವ್ಯಾಪಾರಿಗಳು ಕಂಗಾಲಾಗಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳ ಪ್ರಕಾರ, ನಗರದ ಪ್ರಮುಖ ರಸ್ತೆಗಳಲ್ಲಿ ಫುಟ್‌ಪಾತ್ ತೆರವು ಕಾರ್ಯಾಚರಣೆ ನಡೆಯುತ್ತಿದೆ. ಒಟ್ಟು 1,500 ಕಿಲೋಮೀಟರ್ ಉದ್ದದ ಪ್ರಮುಖ ರಸ್ತೆಗಳಲ್ಲಿ ಈ ಕಾರ್ಯಾಚರಣೆ ನಡೆಯುತ್ತಿದೆ.

## ಹಿಂದುಳಿದ ಸಮುದಾಯದ ಮೋದಿ ಪ್ರಧಾನಿ ಆಗಿರೋದು ಕಾಂಗ್ರೆಸ್‌ಗೆ ಸಹಿಸೋಕೆ ಆಗುತ್ತಿಲ್ಲ: ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ಹಿಂದುಳಿದ ಸಮುದಾಯದ ಮೋದಿ ಪ್ರಧಾನಿ ಆಗಿರೋದು ಕಾಂಗ್ರೆಸ್‌ಗೆ ಸಹಿಸೋಕೆ ಆಗುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಕಾಯಕ ಸಮುದಾಯಗಳ ಸಭೆಯನ್ನುದ್ದೇಶಿಸಿ ಮಾತಮಾಡಿದ ಅವರು, ಕಾಂಗ್ರೆಸ್ ಪರ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಅತ್ಯಂತ ಹಿಂದುಳಿದ ಸಮುದಾಯದ ಮೋದಿ ಅವರು ಪ್ರಧಾನಿ ಆಗಿರೋದು ಕಾಂಗ್ರೆಸ್ ಸಹಿಸೋಕೆ ಆಗುತ್ತಿಲ್ಲ. ಜಾತಿಯ ಕಾರಣಕ್ಕೆ ಕಾಂಗ್ರೆಸ್ ಮೋದಿ ಅವರನ್ನು ವಿರೋಧಿಸುತ್ತಿದೆ. ರಾಜ್ಯದಲ್ಲಿ ಇರೋದು ನಾಲಾಯಕ್ ಕಾಂಗ್ರೆಸ್ ಸರ್ಕಾರ ಅಹಿಂದ ವರ್ಗಗಳ ರಕ್ಷಣೆ ಮಾಡಲು ಆಗದ ನರಸತ್ತ ಕಾಂಗ್ರೆಸ್ ಸರಕಾರ ಇದು ಎಂದು ಲೇವಡಿ ಮಾಡಿದ್ದಾರೆ. ಕಾಂಗ್ರೆಸ್ ಅಲ್ಪಸಂಖ್ಯಾತರ ಓಲೈಕೆಯಿಂದ ರಾಜ್ಯದಲ್ಲಿ ಹಿಂದೂಗಳ ಮಾರಣಹೋಮ ನಡೆಯುತ್ತಿದೆ ಎಂದು ಗಂಭೀರ ಆರೋಪವನ್ನೂ ಮಾಡಿದ್ದಾರೆ. ಅಕ್ರಮ ಬಾಂಗ್ಲಾ ವಲಸಿಗರಿಗಾಗಿ ರಾಜ್ಯ ಸರಕಾರ ಶಾಶ್ವತ ವಾಸ ದೃಢೀಕರಣ ಪತ್ರ ಕೊಡುತ್ತಿದೆ.

ರಾಜ್ಯ ಸರ್ಕಾರದ ಈ ಕೆಲಸವನ್ನ ಭಗವಂತ ಕೂಡ ಮೆಚ್ಚುವುದಿಲ್ಲ. ಪೌರತ್ವ ದೃಢೀಕೃತ ಮಾಡೋದು ಕೇಂದ್ರ ಸರಕಾರ. ರಾಜ್ಯ ಸರಕಾರ ಅಲ್ಲ. ಕಾಂಗ್ರೆಸ್ ಸರಕಾರವನ್ನ ಬುಡಸಮೇತ ಕಿತ್ತು ಹಾಕುತ್ತೇವೆ ಎಂದು ಶಪಥ ಮಾಡಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಕಪಟ ನಾಟಕ ಮಾಡುತ್ತಿದೆ. ಬಸವಣ್ಣನವರ ಹೆಸರು ಹೇಳಿಕೊಂಡು, ಕೈಯಲ್ಲಿ ಶಿವಲಿಂಗ ಹಿಡಿದುಕೊಂಡು ಕಾಂಗ್ರೆಸ್ ನಾಟಕ ಮಾಡುತ್ತಿದೆ. ಅಂಬೇಡ್ಕರ್ ಈ ದೇಶದ ಪ್ರಧಾನಿ ಆಗಬೇಕಿತ್ತು. ಕಾಂಗ್ರೆಸ್ ಇದನ್ನು ತಪ್ಪಿಸಿತು, ಕಾಂಗ್ರೆಸ್ ಈಗ ಸಂವಿಧಾನ ಹಿಡಿದುಕೊಂಡು ನಾಟಕ ಮಾಡುತ್ತಿದೆ. ಕಾಂಗ್ರೆಸ್ ಗೆ ಅಂಬೇಡ್ಕರ್, ಮಹಾತ್ಮ ಗಾಂಧಿ, ದೇವರಾಜ ಅರಸು ಹೇಳುವ ನೈತಿಕತೆ



ಇಲ್ಲ ಎಂದು ಕಿಡಿಕಾರಿದ್ದಾರೆ.

ಇನ್ನೂ ಮೈಸೂರು ದಸರೆಯಲ್ಲಿ ಕಂಬಳ ನಡೆಸುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಸರ್ಕಾರ ಮೈಸೂರಿನ ಜನರ ಭಾವನೆಗೆ ಬೆಲೆ ಕೊಡಬೇಕು. ಭಂಡತನ ಪ್ರದರ್ಶನ ಮಾಡಬಾರದು.

ಮೈಸೂರು ದಸರಾ ವೇಳ ಕಂಬಳ ನಡೆಸುವುದು ಬೇಡ. ಕರಾವಳಿಯಲ್ಲೇ ಕಂಬಳವನ್ನು ಸರ್ಕಾರ ಅದ್ದೂರಿಯಾಗಿ ಮಾಡಲಿ. ಅಲ್ಲಿಯ ಪರಂಪರೆಯನ್ನು ಮೈಸೂರಿನ ಪರಂಪರೆಗೆ ತುರಕ ಬೇಡಿ. ಕಂಬಳಕ್ಕೆ ತನ್ನದೆ ಆದ ಶ್ರೀಮಂತಿಕೆ ಇದೆ. ಅದನ್ನು ಸರ್ಕಾರ ಉಳಿಸಿಕೊಂಡು ಹೋಗಬೇಕು. ಕರಾವಳಿಯಲ್ಲಿ ಕಂಬಳವನ್ನ ಇನ್ನೂ ಅದ್ದೂರಿ ಮಾಡಿ ನಮ್ಮ ಸಂಪೂರ್ಣ ಸಹಕಾರ ಇರುತ್ತದೆ ಎಂದು ವಿಜಯೇಂದ್ರ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

## ಕರ್ನಾಟಕದ ವಿಳಂಬ ನೀತಿ: ಕೇಂದ್ರದಿಂದ ಬೆಂಗಳೂರಿಗೆ ಸಿಗಲಿದ್ದ 4500 ಇ-ಬಸ್ ಬೇರೆ ರಾಜ್ಯಗಳ ಪಾಲಾಗುವ ಆತಂಕ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಪಿಎಂ ಇ-ಡ್ರೈವ್ ಯೋಜನೆಯಡಿ 4,500 ಎಲೆಕ್ಟ್ರಿಕ್ ಬಸ್‌ಗಳು ಮಂಜೂರಾಗಿ ತಿಂಗಳುಗಳೇ ಕಳೆದಿವೆ. ಇದೀಗ ರಾಜ್ಯ ಸರ್ಕಾರದ ವಿಳಂಬ ನೀತಿಯಿಂದ ಅವುಗಳು ಬೇರೆ ರಾಜ್ಯಗಳ ನಗರಗಳ ಪಾಲಾಗುವ ಆತಂಕ ಎದುರಾಗಿದೆ. ಕರ್ನಾಟಕ ಸಚಿವ ಸಂಪುಟದಿಂದ ಇನ್ನೂ ಅನುಮೋದನೆ ಸಿಗದಿರುವ ಹಿನ್ನೆಲೆಯಲ್ಲಿ ಕಾರ್ಯಾದೇಶ ಹೊರಡಿಸುವ ಪ್ರಕ್ರಿಯೆ ಸ್ಥಗಿತಗೊಂಡಿದೆ. ಈ ಮಧ್ಯೆ, ಬೆಂಗಳೂರಿಗೆ ಹಂಚಿಕೆಯಾಗ ಬೇಕಿದ್ದ ಬಸ್‌ಗಳ ಒಂದು ಭಾಗವನ್ನು ಹಂಚಿಕೆ ಮಾಡುವಂತೆ ಬೇರೆ ರಾಜ್ಯಗಳಿಂದ ಕೇಂದ್ರ ಸರ್ಕಾರಕ್ಕೆ ಬೇಡಿಕೆ ಸಲ್ಲಿಕೆಯಾಗಿದೆ ಎಂದು ವರದಿಯಾಗಿದೆ. ಸದ್ಯ, ಪಿಎಂ ಇ-ಡ್ರೈವ್ ಯೋಜನೆಯಡಿ ಸೂರತ್ 500, ಹೈದರಾಬಾದ್ 600, ಆಂಧ್ರಪ್ರದೇಶ 2,000, ರಾಜಸ್ಥಾನ 900, ಮೇಘಾಲಯ 20 ಹಾಗೂ ಜಮ್ಮು-ಕಾಶ್ಮೀರ 200 ಎಲೆಕ್ಟ್ರಿಕ್ ಬಸ್‌ಗಳ ಹೆಚ್ಚುವರಿ ಹಂಚಿಕೆಗೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿವೆ ಎಂದು 'ಮನಿ ಕಂಟ್ರೋಲ್' ವರದಿ ಮಾಡಿದೆ. ಒಟ್ಟಾರೆ 4,220 ಹೆಚ್ಚುವರಿ ಬಸ್‌ಗಳಿಗೆ ಕೇಂದ್ರ ಸರ್ಕಾರಕ್ಕೆ ಬೇಡಿಕೆ ಸಲ್ಲಿಕೆಯಾಗಿದೆ.

ಬೆಂಗಳೂರಿಗೆ ಬಸ್ ನೀಡುವ ಬಗ್ಗೆ ಕೇಂದ್ರ ಸರ್ಕಾರವು 2025ರ ಡಿಸೆಂಬರ್‌ನಲ್ಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿತ್ತು. ಆದರೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಇನ್ನೂ ಕಾರ್ಯಾದೇಶ ಹೊರಡಿಸಿಲ್ಲ.

ರಾಜ್ಯ ಸಚಿವ ಸಂಪುಟದ ಅನುಮೋದನೆಗಾಗಿ ಸಂಸ್ಥೆ ಕಾಯುತ್ತಿದೆ. ಇನ್ನೊಂದೆಡೆ ಹೈದರಾಬಾದ್ ಫೆಬ್ರವರಿ 18ರಂದೇ, ಸೂರತ್ ಮಾರ್ಚ್ 9ರಂದು ಹಾಗೂ ಅಹಮದಾಬಾದ್ ಮಾರ್ಚ್ 16ರಂದು



ಕಾರ್ಯಾದೇಶ ನೀಡಿವೆ. ದೆಹಲಿಯೂ ಜುಲೈ ಮಧ್ಯಭಾಗದಲ್ಲಿ ಕಾರ್ಯಾದೇಶ ನೀಡುವ ಸಾಧ್ಯತೆಯಿದೆ. ಈ ನಡುವೆ ಕೇಂದ್ರದ ಬೃಹತ್ ಕೈಗಾರಿಕಾ ಸಚಿವಾಲಯವೂ ಕರ್ನಾಟಕ ಸರ್ಕಾರಕ್ಕೆ ಪತ್ರ ಬರೆದು, ಬೇಡಿಕೆ ದೃಢೀಕರಣ ಪತ್ರ ಪಡೆದ ನಾಲ್ಕು ವಾರಗಳೊಳಗೆ ಕಾರ್ಯಾದೇಶ ನೀಡಬೇಕಿದ್ದರೂ ಅದು ಇನ್ನೂ ಆಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದೆ.

ಶೀಘ್ರದಲ್ಲೇ ಒಪ್ಪಂದ ಪ್ರಕ್ರಿಯೆ ಪೂರ್ಣಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಿದೆ. ದೇಶಾದ್ಯಂತ ಪಿಎಂ ಇ ಡ್ರೈವ್ ಯೋಜನೆಯಡಿ 14,028 ಎಲೆಕ್ಟ್ರಿಕ್ ಬಸ್‌ಗಳಿಗೆ ಅನುಮೋದನೆ ದೊರೆತಿದ್ದು, ಈಗಾಗಲೇ 13,800 ಬಸ್‌ಗಳ ಖರೀದಿ ಪ್ರಕ್ರಿಯೆ ಪೂರ್ಣಗೊಂಡಿದೆ.

ಪುಣೆ 1,000 ಬಸ್‌ಗಳಿಗೆ ಕಾರ್ಯಾದೇಶ ನೀಡಿದ್ದು, ಮುಂಬೈ ಕೂಡ ಇದೇ ತಿಂಗಳ ಅಂತ್ಯದೊಳಗೆ ಪ್ರಕ್ರಿಯೆ ಪೂರ್ಣಗೊಳಿಸುವ ನಿರೀಕ್ಷೆಯಿದೆ. ಕರ್ನಾಟಕ ಸರ್ಕಾರ ಇನ್ನೂ ವಿಳಂಬ ಮಾಡಿದರೆ, ಬೆಂಗಳೂರಿನ ಸಾರ್ವಜನಿಕ ಸಾರಿಗೆ ವ್ಯವಸ್ಥೆಗೆ ಬಲ ತುಂಬಬೇಕಿದ್ದ 4,500 ಎಲೆಕ್ಟ್ರಿಕ್ ಬಸ್‌ಗಳ ಯೋಜನೆ ಕೈತಪ್ಪುವ ಅಪಾಯ ಎದುರಾಗುವ ಸಾಧ್ಯತೆ ಇದೆ ಎಂಬ ಆತಂಕ ವ್ಯಕ್ತವಾಗಿದೆ.

# ಅಕ್ಟೋಬರ್, ನವೆಂಬರ್‌ನಲ್ಲಿ ಪಂಚಾಯತ್ ಚುನಾವಣೆ ನಡೆಯಲಿದೆ: ಸಚಿವ ಈಶ್ವರ್ ಖಂಡ್ರೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಬಹುತೇಕ ಗ್ರಾಮ ಪಂಚಾಯತ್‌ಗಳ ಆಡಳಿತಾವಧಿ ಮುಗಿದಿದ್ದು, ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ಚುನಾವಣೆ ನಡೆಯಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ತಿಳಿಸಿದ್ದಾರೆ.

ಶನಿವಾರ ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೆಲವು ಪಂಚಾಯತ್‌ಗಳ ಮೇಲ್ದರ್ಜೆಯಿಂದಾಗಿ ಕ್ಷೇತ್ರ ಪುನರ್ ವಿಂಗಡಣೆ ಮಾಡಬೇಕಾಗಿ ಬಂದಿದ್ದು, ಈ ತಿಂಗಳ ಅಂತ್ಯ ಅಥವಾ ಮುಂದಿನ ತಿಂಗಳಲ್ಲಿ ಈ ಪ್ರಕ್ರಿಯೆ ಮುಗಿಸಿ, ಮೀಸಲಾತಿ ನಿರ್ಧರಿಸಿ ರಾಜ್ಯ ಚುನಾವಣೆ ಆಯೋಗಕ್ಕೆ ಸಲ್ಲಿಸಲಾಗುವುದು. ಆಯೋಗ 45 ದಿನಗಳಲ್ಲಿ ಚುನಾವಣೆ ನಡೆಸುತ್ತದೆ ಎಂದರು.

ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬದ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ ಎಸ್.ಐ.ಆರ್. ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಎಲ್ಲಾ ಸರ್ಕಾರಿ ಸಿಬ್ಬಂದಿ ಆ ಕಾರ್ಯದಲ್ಲಿ ನಿರತರಾಗಿದ್ದಾರೆ. ಹೀಗಾಗಿ ಕಾಲಾವಕಾಶ ಕೇಳಲಾಗಿದೆ. ಮಹಾತ್ಮ ಗಾಂಧಿ ಅವರು ಗ್ರಾಮ ಸ್ವರಾಜ್ಯದ ಕಲ್ಪನೆ ಹುಟ್ಟುಹಾಕಿದ್ದರು. ಕರ್ನಾಟಕದಲ್ಲಿ 1980ರಲ್ಲಿ ನಸೀರ್ ಸಾಬ್ ಅವರು ಅಧಿಕಾರ ವಿಕೇಂದ್ರೀಕರಣಕ್ಕೆ ನಾಂದಿ ಹಾಡಿದರೆ, ದಿವಂಗತ ಪ್ರಧಾನಿ ರಾಜೀವ್ ಗಾಂಧಿ ಅವರು ದೇಶಾದ್ಯಂತ ಪಂಚಾಯತ್



ರಾಜ್ ವ್ಯವಸ್ಥೆ ಜಾರಿಗೆ ತರಲು 1989ರಲ್ಲಿ 64ನೇ ಸಾಂವಿಧಾನಿಕ ತಿದ್ದುಪಡಿಗೆ ಪ್ರಯತ್ನ ಮಾಡಿದ್ದರು. ನಂತರ 1992ರಲ್ಲಿ 73ನೇ ಸಾಂವಿಧಾನಿಕ ತಿದ್ದುಪಡಿ ಮಾಡಿ, 1993ರ ಎಪ್ರಿಲ್ 24 ರಿಂದ ಪಂಚಾಯತ್ ರಾಜ್ ವ್ಯವಸ್ಥೆ ಜಾರಿಗೆ ಬಂದಿದೆ. ಅಂದರೆ ಗ್ರಾಮಗಳ ಆಡಳಿತವನ್ನು ಅದೇ ಗ್ರಾಮದವರು ನಿರ್ವಹಿಸಬೇಕು ಎಂಬುದೇ ಇದರ ಉದ್ದೇಶ ಎಂದು ತಿಳಿಸಿದರು. **ಮನೆ ಮನೆಗೆ ಇ-ಸ್ವತ್ತು:** ಇನ್ನು ಇ-ಸ್ವತ್ತಿಗೆ ಸಂಬಂಧಿಸಿದಂತೆ ಗ್ರಾಮೀಣ ಪ್ರದೇಶದಲ್ಲಿ ಸಮಸ್ಯೆ ಇದ್ದು, ಸಾಕಷ್ಟು ದೂರುಗಳು ಬರುತ್ತಿವೆ. ಈ ನಿಟ್ಟಿನಲ್ಲಿ ಎಸ್.ಐ.ಆರ್. ಪ್ರಕ್ರಿಯೆ ಮುಗಿದ ನಂತರ, ಈ ವ್ಯವಸ್ಥೆಯನ್ನು ಮತ್ತಷ್ಟು ಸರಳೀಕರಿಸಿ, ಎಲ್ಲಾ ಗ್ರಾಮೀಣ ಪ್ರದೇಶದ ಆಸ್ತಿ ಮಾಲಿಕರಿಗೆ ಯಾವುದೇ ತೊಡಕಾಗದಂತೆ ಮನೆ ಬಾಗಿಲಿಗೇ ಇ-ಸ್ವತ್ತು ನೀಡಲು ಕ್ರಮ ವಹಿಸಲಾಗುವುದು ಎಂದರು.ಬಿ ಖರಾಬು ಜಮೀನು ಬಳಸಿಕೊಂಡು ಲೇಔಟ್ ನಿರ್ಮಿಸಿದ್ದರೆ ಅಲ್ಲಿ ಇ-ಸ್ವತ್ತು ನೀಡಲಾಗುವುದಿಲ್ಲ. ಇದಕ್ಕೆ ಕಂದಾಯ ಇಲಾಖೆಯ ಸಚಿವರೊಂದಿಗೆ ಸಭೆ ನಡೆಸಬೇಕಾಗುತ್ತದೆ ಎಂದು ತಿಳಿಸಿದರು.

ಕರ್ನಾಟಕದ ಗ್ರಾಮ ಪಂಚಾಯತ್‌ಗಳಿಗೆ ಕೇಂದ್ರ ಸರ್ಕಾರದಿಂದ 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಬರಬೇಕಾದ 2186.20 ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಿಲ್ಲ. ತಂತ್ರಾಂಶದಲ್ಲಿನ ತಾಂತ್ರಿಕ ಸಮಸ್ಯೆಯನ್ನೇ ಮುಂದಿಟ್ಟುಕೊಂಡು ಹಣ ಬಿಡುಗಡೆ ಮಾಡುವುದಿಲ್ಲ ಎನ್ನುವುದು ಸರಿಯಲ್ಲ. ರಾಜ್ಯದ ಸಂಸತ್ ಸದಸ್ಯರು ಒಕ್ಕೋರಲಿನಿಂದ ಈ ಬಗ್ಗೆ ಧ್ವನಿ ಎತ್ತಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರು ಪೂರೈಕೆ ಮಾಡಲು ಹಣಕಾಸಿನ ಕೊರತೆ ಇಲ್ಲ. ಈಗಾಗಲೇ 117 ಕೋಟಿ ರೂ. ಹಣ ಬಿಡುಗಡೆ ಮಾಡಲಾಗಿದೆ. ಮಿಗಿಲಾಗಿ ಬೆಳಗಾವಿ ಪ್ರಾದೇಶಿಕ ಮಟ್ಟದ ಸಭೆ ನಡೆಸಿದ ಮುಖ್ಯಮಂತ್ರಿಯವರು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ. ನೀಡುವುದಾಗಿ ಘೋಷಿಸಿದ್ದಾರೆ. ಹೀಗಾಗಿ ಬರ ಪರಿಸ್ಥಿತಿಯ ನಡುವೆಯೂ ನೀರು ಪೂರೈಕೆಗೆ ಆರ್ಥಿಕ ಸಮಸ್ಯೆ ಎದುರಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

## ಗುಳೆ ಹೋಗದಂತೆ ಮನವಿ

ಮನ್ರೇಗಾದ ಬದಲಾದ ರೂಪ ವಿ.ಬಿ.ಜಿ ರಾಮ್ ಜಿ ಯನ್ನು ರಾಜ್ಯ ಸರ್ಕಾರ ಆರ್ಥಿಕ ಹೊರೆಯ ನಡುವೆಯೂ ಬಡವರು, ದಲಿತರು, ವಂಚಿತರು, ಗ್ರಾಮೀಣ ಬಡವರ ಹಿತದೃಷ್ಟಿಯಿಂದ ಜಾರಿಗೆ ತಂದಿದ್ದು, ಗ್ರಾಮೀಣ ಜನರಿಗೆ ಉದ್ಯೋಗದ ಖಾತ್ರಿ ನೀಡಲಾಗಿದೆ. ಹೀಗಾಗಿ ಯಾರೂ ಗುಳೆ ಹೋಗುವ ಅಗತ್ಯವಿಲ್ಲ ಎಂದು ಸಚಿವರು ಹೇಳಿದರು.2029ರ ವೇಳೆಗೆ ಒಂದು ದೇಶ ಒಂದು ಚುನಾವಣೆ ನಡೆಸುತ್ತೇವೆ ಎಂಬ ಸಲಹಾ ಸಮಿತಿಯ ಅಧ್ಯಕ್ಷರ ಹೇಳಿಕೆ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವ ಖಂಡ್ರೆ, ಕೇಂದ್ರ ಸರ್ಕಾರ ಸರ್ವಾಧಿಕಾರದ ಧೋರಣೆ ಹೊಂದಿದೆ.

**ಈ ದಿನದ ದರ** ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 14,433/Gram 24ct ₹13,230/Gram 22ct | ಬೆಳ್ಳಿ: ₹235.00/Gram

## ಮೈಸೂರಿನ 5 ವರ್ಷದ ಮಗುವಿನ ಲಿವರ್ ದಾನ: ಬೆಂಗಳೂರಿನ 13 ವಯಸ್ಸಿನ ಬಾಲಕಿಗೆ ಜೀವದಾನ!

• ಉದಯವಾಹಿನಿ, ಬೆಂಗಳೂರು

5 ವರ್ಷದ ಮಗುವಿನ ಅಂಗಾಂಗ ದಾನವು 13 ವರ್ಷದ ಬಾಲಕಿ ಲಕ್ಷ್ಮೀ ಪ್ರಿಯಾ ಗೆ ಹೊಸ ಬದುಕಿನ ಭರವಸೆ ನೀಡಿದೆ.
ಅಪರೂಪದ ಜನ್ಮಜಾತ ಪಿತ್ತನಾಳದ ಕಾಯಿಲೆ ಬಿಲಿಯರಿ ಅಟ್ರೇಶಿಯಾಯಿಂದ ಬಳಲುತ್ತಿದ್ದ ಲಕ್ಷ್ಮೀ ಪ್ರಿಯಾಗೆ ಯಶವಂತಪುರದ ಸ್ಪರ್ಶ್ ಆಸ್ಪತ್ರೆಯಲ್ಲಿ ಯಶಸ್ವಿಯಾಗಿ ಲಿವರ್ ಟ್ರಾನ್ಸ್‌ಪ್ಲಾಂಟ್ ಶಸ್ತ್ರಚಿಕಿತ್ಸೆ ನಡೆಸಲಾಗಿದ್ದು, ಅವರು ಇದೀಗ ಆರೋಗ್ಯಕರ ಜೀವನದತ್ತ ಚೇತರಿಸಿಕೊಳ್ಳುತ್ತಿದ್ದಾರೆ.

ಶಿಶುವಾಗಿದ್ದಾಗಲೇ ಕಾಯಿಲೆ ಪತ್ತೆಯಾಗಿದ್ದ ಹಿನ್ನೆಲೆಯಲ್ಲಿ 2012ರಲ್ಲಿ ಕಸಾಯಿ ಪೋರ್ಟೋಎಂಟೆರೋಸ್ಟಮಿ ಶಸ್ತ್ರಚಿಕಿತ್ಸೆ ನಡೆಸಲಾಗಿತ್ತು. ಆದರೂ, ಕಾಲಕ್ರಮೇಣ ಲಿವರ್‌ಗೆ ತೀವ್ರ ಹಾನಿಯಾಗಿದ್ದು, ಕಾಮಾಲೆ, ದೈಹಿಕ ಬೆಳವಣಿಗೆ ಕುಂಠಿತ, ಪದೇ ಪದೇ ಆಸ್ಪತ್ರೆಗೆ



ದಾಖಲಾಗುವುದು ಹಾಗೂ ಪೋರ್ಟಲ್ ಹೈಪರ್‌ಟೆನ್ಷನ್‌ನಿಂದ ಜೀರ್ಣಾಂಗದ ರಕ್ತಸ್ರಾವದ ಅಪಾಯ ಎದುರಿಸುತ್ತಿದ್ದರು.

ಮೈಸೂರಿನ ಐದು ವರ್ಷದ ಮಗುವಿನ ಯಕೃತ್ತು ಅಂಗಾಂಗ ದಾನದ ಮೂಲಕ ದೊರೆಯಿತು. ಈ ಸಕಾಲದಲ್ಲಿ ದೊರೆತ ಅಂಗಾಂಗ ದಾನ, ವಿವಿಧ ವಿಭಾಗಗಳ ವೈದ್ಯರ ಸಮನ್ವಯ ಹಾಗೂ ಎಲ್ಲರ ಸಹಕಾರದಿಂದ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿದೆ.

ಅಂಗಾಂಗ ದಾನವು ಮಾನವೀಯತೆಯ ಅತ್ಯುನ್ನತ ಸೇವೆ. ಒಂದು ಮಗುವಿನ ಜೀವ ಉಳಿಸಲು ಮತ್ತೊಂದು ಕುಟುಂಬದ ಅಂಗಾಂಗ ದಾನ ಹಾಗೂ ಇಡೀ ಗ್ರಾಮದ ಸಹಕಾರ ಒಂದಾದರೆ ಜೀವಗಳನ್ನು ಉಳಿಸಬಹುದು ಎಂಬುದಕ್ಕೆ ಈ ಪ್ರಕರಣ ಅತ್ಯುತ್ತಮ ಉದಾಹರಣೆ ಎಂದು ಸ್ಪರ್ಶ್ ಆಸ್ಪತ್ರೆ ಯಶವಂತಪುರದ ಯುನಿಟ್ ಸಿಒಒ ಅರ್ನಬ್ ಆದಕ್ ಹೇಳಿದರು.

## ವೈಟ್‌ಫೀಲ್ಡ್‌ನ ಹೋಪ್ ಫಾರ್ಮ್ ಸರ್ಕಲ್ ಬಳಿ ಕಿರಿ ಸಂಸ್ಥೆಯ 38ನೇ ಶಾಖೆಯನ್ನು ಉದ್ಘಾಟಿಸಲಾಯಿತು

• ಉದಯವಾಹಿನಿ, ಕೆ.ಆರ್.ಪುರಂ

ಆಧ್ಯಾತ್ಮಿಕ ಮತ್ತು ಧಾರ್ಮಿಕ ಉತ್ಪನ್ನಗಳಿಗಾಗಿ ಭಾರತದ ಪ್ರಮುಖ ಬ್ರ್ಯಾಂಡ್ ಗಳಲ್ಲಿ ಒಂದಾದ ಗಿರಿ ಸಂಸ್ಥೆ ಶಾಖೆಯನ್ನು ಇಂದು ವೈಟ್‌ಫೀಲ್ಡ್ ನ ಹೋಪ್ ಫಾರ್ಮ್ ಸರ್ಕಲ್ ಬಳಿ ಕಿರಿ ಸಂಸ್ಥೆಯ 38ನೇ ಶಾಖೆಯನ್ನು ಉದ್ಘಾಟಿಸಲಾಯಿತು. ಈ ಬಗ್ಗೆ ಮತನಾಡಿದ ವ್ಯವಸ್ಥಾಪಕ ನಿರ್ದೇಶಕಿ ಶಾರದ ಪ್ರಕಾಶ್, ಭಾರತದ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಸಂರಕ್ಷಿಸುವ ಮತ್ತು ಉತ್ತೇಜಿಸುವ ಬ್ರ್ಯಾಂಡ್‌ನ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದರು.

ವೈಟ್‌ಫೀಲ್ಡ್ ಶಾಖೆಯಲ್ಲಿ ಪೂಜಾ ಅಗತ್ಯ ವಸ್ತುಗಳು, ವಿಗ್ರಹಗಳು, ಹಬ್ಬದ ಉತ್ಪನ್ನಗಳು, ಸಾವಯವ ಆಹಾರಗಳು, ಕರಕುಶಲ ವಸ್ತುಗಳು, ಆಧ್ಯಾತ್ಮಿಕ ಪುಸ್ತಕಗಳು ಮತ್ತು ಸಂಗೀತ ಮತ್ತು ಸಾಂಪ್ರದಾಯಿಕ ಉಡುಪುಗಳ ವ್ಯಾಪಕ ಆಯ್ಕೆಯನ್ನು ನೀಡುತ್ತದೆ ಎಂದರು. ತಮಿಳುನಾಡಿನಲ್ಲಿ ಅತ್ಯುತ್ತಮ



ಪ್ರವಾಸಿ ಸ್ನೇಹಿ ಶಾಪಿಂಗ್ ಕೇಂದ್ರ ಪ್ರಶಸ್ತಿಯನ್ನು ಸಹ ಪಡೆದುಕೊಂಡಿದೆ ಎಂದು ನುಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಮರ್ ಗಿರೀಶ್, ಬಾಲು ಮತ್ತಿತರರು ಉಪಸ್ಥಿತರಿದ್ದರು.



• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ವಿದ್ಯಾರಣ್ಯಪುರದ ಶ್ರೀ ಮಾತಾಜಿ ಅಲಸೂರಮ್ಮ ರಾಘವೇಂದ್ರ ಸೇವಾ ಟ್ರಸ್ಟಿನ ಶ್ರೀರಾಘವೇಂದ್ರ ಸ್ವಾಮಿಗಳ ಮಠದಲ್ಲಿ ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ಜುಲೈ 10ರಂದು ಸಂಜೆ ಏರ್ಪಡಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿದುಷಿ ಶ್ರೀಮತಿ ರಂಜಿತಾ ಪ್ರಸಾದ್ ಅವರು ಅಪರೋಕ್ಷ ಜ್ಞಾನಿಗಳಿಂದ ರಚಿಸಲ್ಪಟ್ಟ ಹಲವಾರು ಅಪರೂಪದ ಹರಿದಾಸರ ಪದಗಳನ್ನು ಪ್ರಸ್ತುತ ಪಡಿಸಿದರು. ಪಿಟೀಲು ವಾದನದಲ್ಲಿ ಶ್ರೀ ಎಂ.ಎಸ್. ಸತ್ಯನಾರಾಯಣ, ಮೃದಂಗ ವಾದನದಲ್ಲಿ ಶ್ರೀ ಶ್ರೀನಿವಾಸ್ ಅನಂತರಾಮಯ್ಯ ಸಹಕರಿಸಿದರು.

## ಶುದ್ಧೀಕರಣ ಮಾಡ್ಬೇಕು, ಯುವಕರ ಭವಿಷ್ಯದ ಜೊತೆ ಚೆಲ್ಲಾಟ ಸರಿಯಲ್ಲ': ಪ್ರಿಯಾಂಕ್ ಖರ್ಗೆ



• ಉದಯವಾಹಿನಿ, ಬೆಂಗಳೂರು

ಕೆಪಿಎಸ್ಸಿ ಅಧ್ಯಕ್ಷ ಶಿವಶಂಕರಪ್ಪ ಅವರ ಪುತ್ರಿ ಸುಮಾ ಎಸ್ ಸಾಹುಕಾರ್ ವಿರುದ್ಧ ಬೆಂಗಳೂರಿನ ವಿಧಾನಸೌಧ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸುವಾಗ ನಕಲಿ ಆದಾಯ ಮತ್ತು ಜಾತಿ ಪ್ರಮಾಣಪತ್ರಗಳನ್ನು ಸಲ್ಲಿಸಿದ ಆರೋಪದ ಮೇಲೆ ಪ್ರಕರಣ ದಾಖಲಾಗಿದೆ. ಅಭ್ಯರ್ಥಿಗಳ ದಾಖಲೆ ಪರಿಶೀಲನೆ ವೇಳೆ ಸುಮಾ ಸಲ್ಲಿಸಿದ್ದ ದಾಖಲೆಗಳಲ್ಲಿನ ವಂಚನೆ ಬಯಲಾಗಿದೆ. ಈ ಪ್ರಕರಣ ಬಗ್ಗೆ ಇಂದು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಕೆಪಿಎಸ್ ಸಿ ಸಾಂವಿಧಾನಾತ್ಮಕ ಸಂಸ್ಥೆಯಾಗಿರುವುದರಿಂದ ಕಾನೂನಾತ್ಮಕವಾಗಿ ಹೇಗೆ ನಿಭಾಯಿಸಬಹುದು ಎಂದು ನೋಡುತ್ತೇವೆ ಎಂದರು. ಇದು ಬೇಲಿಯೇ ಎದ್ದು ಹೊಲ ಮೇಯ್ದಂಥ ಪ್ರಕರಣ. ಬೇಲಿಯೇ ಎದ್ದು ಹೊಲ ಮೇಯ್ದರೆ ಏನು ಮಾಡಲು ಸಾಧ್ಯ, ಪರಿಸ್ಥಿತಿ ನಮ್ಮ ಕೈಯಲ್ಲಿಲ್ಲ. ಇಲ್ಲಿ ಎರಡು ವಿಚಾರ, ನನಗೆ ಸ್ವತಂತ್ರವಾಗಿ ಈ ವಿಚಾರ ಬಿಟ್ಟರೆ ಕೆಎಟಿ, ಕೆಪಿಎಸ್ ಸಿನ ರದ್ದು ಮಾಡ್ತೀನಿ. ಅದು ಸಂವಿಧಾನಾತ್ಮಕವಾಗಿಯೇ ಮಾಡಬೇಕಾಗುತ್ತದೆ, ಹೊಸ ಕಾನೂನು ತರಬೇಕಾಗುತ್ತದೆ. ಕಾನೂನು ಮಾಡುವವರು ನಾವೇ ತಾನೇ. ಶಾಸಕನವನ್ನು ರಚನೆ ಮಾಡುವ ನಾವು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಎಲ್ಲರೂ ಸೇರಿ ಒಂದು ತೀರ್ಮಾನ ತೆಗೆದುಕೊಂಡರೆ ಶುದ್ಧೀಕರಣ ಮಾಡಲು ಒಂದು ತೀರ್ಮಾನಕ್ಕೆ ಬರಬಹುದು.ಯುವಕರ ಭವಿಷ್ಯದ ಜೊತೆ ಚೆಲ್ಲಾಟ ಸರಿಯಲ್ಲ ಎಂದರು.

ವ್ಯವಸ್ಥೆ ಹಾದಿತಪ್ಪಿ ಹೋದಾಗ ಯುವಕರು ತಿರುಗಿಬೀಳುತ್ತಾರೆ, ಅದನ್ನು ನಾವು ನೋಡಿದ್ದೇವೆ. ನಿನ್ನೆ ಕೇಸಿನ ಬಗ್ಗೆ ಎಫ್ ಐಆರ್ ಆಗಿದೆ, ಅದರ ಸತ್ಯಾಸತ್ಯತೆ ನೋಡಿ ಹೇಳಬೇಕಾಗುತ್ತದೆ. ದಾಖಲೆ ಸೂಕ್ತವಾಗಿ ಪರಿಶೀಲಿಸಿ ಹೇಳಬೇಕಾಗುತ್ತದೆ ಎಂದರು.

> ಕೆಪಿಎಸ್ಸಿಯಲ್ಲಿ ನೇಮಕಾತಿ ನಿಲ್ಲುವುದಿಲ್ಲ, ಮುಂದುವರಿಯುತ್ತದೆ, ಈ ಹಿಂದೆ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ ತಂದಿದ್ದೇವೆ. ಅದಕ್ಕೆ ನಿಯಮ ರಚನೆಯಾಗಿರಲಿಲ್ಲ, ಅದನ್ನು ಇನ್ನೊಂದು ವಾರ ಹತ್ತು ದಿನಗಳಲ್ಲಿ ಮಾಡುತ್ತೇನೆ ಎಂದು ತಿಳಿಸಿದರು. -ಪ್ರಿಯಾಂಕ್ ಖರ್ಗೆ

## ಸೈಕಲ್‌ನಲ್ಲೇ ತಿರುಪತಿ ತಲುಪಿದ ಶಾಸಕ!



• ಉದಯವಾಹಿನಿ, ಬೆಂಗಳೂರು

ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಹಿರಿಯ ಶಾಸಕ ಎಸ್. ಸುರೇಶ್ ಕುಮಾರ್ ಅವರು ತಮ್ಮ ತಂಡದೊಂದಿಗೆ ಬೆಂಗಳೂರಿನಿಂದ ಆಂಧ್ರಪ್ರದೇಶದ ತಿರುಪತಿಗೆ ಸೈಕಲ್ ಮೂಲಕವೇ ಪ್ರಯಾಣ ಬೆಳೆಸಿ ಎಲ್ಲರ ಹುಬ್ಬೇರಿಸಿದ್ದಾರೆ. ಬೆಂಗಳೂರಿನಿಂದ ತಿರುಪತಿ ವೆಂಕಟರಮಣ ಸ್ವಾಮಿ ಸನ್ನಿಧಿವರೆಗಿನ ಒಟ್ಟು 265ಕಿಲೋಮೀಟರ್ ದೂರದ ಹಾದಿಯನ್ನು ಶಾಸಕರು ಮತ್ತು ಅವರ ಸೈಕ್ಲಿಂಗ್ ತಂಡ ಕೇವಲ 14 ಗಂಟೆ 10 ನಿಮಿಷಗಳಲ್ಲಿ ಕ್ರಮಿಸಿ ದಾಖಲೆ ಬರೆದಿದ್ದಾರೆ.

ತಮ್ಮ 60ರ ಹರೆಯದಲ್ಲೂ ಯುವಕರಿಗೂ ಮಾದರಿಯಾಗುವಂತೆ ಸೈಕಲ್ ತುಳಿದಿರುವ ಸುರೇಶ್ ಕುಮಾರ್ ಆರೋಗ್ಯ ಮತ್ತು ಪರಿಸರ ಸಂರಕ್ಷಣೆಯ ಮಹತ್ವದ ಸಂದೇಶವನ್ನು ಸಾರಿದ್ದಾರೆ. ಬೆಂಗಳೂರಿನಿಂದ ಹೊರಟ ಈ ಸೈಕ್ಲಿಂಗ್ ತಂಡವು ಹೆದ್ದಾರಿಯ ಕಠಿಣ ಹಾದಿ, ಏರಿಳಿತಗಳನ್ನು ಯಶಸ್ವಿಯಾಗಿ ದಾಟಿ ನಿಗದಿತ ಅವಧಿಗಿಂತ ಮುನ್ನವೇ ತಿರುಪತಿ ಬೆಟ್ಟದ ತಪ್ಪಲನ್ನು ತಲುಪಿದೆ. 10 ಜನರ ತಂಡದ ಜೊತೆ ಸುರೇಶ್ ಕುಮಾರ್ ಸೈಕಲ್‌ನಲ್ಲಿ ತೆರಳಿದ್ದು, ಈ ಟೀಂ ಸತತ 3ನೇ ಬಾರಿಗೆ ತಿರುಪತಿಗೆ ಸೈಕ್ಲಿಂಗ್ ಮಾಡಿದೆ.

ಬಸವೇಶ್ವರದಿಂದ ರಾಜಾಜಿನಗರ ಒಂದನೇ ಬ್ಲಾಕ್, ಯಶವಂತಪುರ, ಬಿ ಇ ಎಲ್ ವೃತ್ತ, ಅವಲಳ್ಳಿ ಅರಣ್ಯ ಪ್ರದೇಶ, ರಾಜಾನುಕುಂಟೆ, ನಾಡಪ್ರಭು ಕೆಂಪೇಗೌಡ ವಿಮಾನ ನಿಲ್ದಾಣ, ದೇವನಹಳ್ಳಿ, ವಿಜಯಪುರ, ಕೈವಾರ, ಮದನಪಲ್ಲಿ, ಪೀಲೇರು ಮಾರ್ಗವಾಗಿ ಸಾಗಿ ತಿರುಪತಿ ತಲುಪಿದೆ.

## ಇಂತಹ ನಂಬಿಕೆ ಹುಟ್ಟುಹಾಕಿದ್ದು ಮನುವಾದಿಗಳು

• ಉದಯವಾಹಿನಿ, ಬೆಂಗಳೂರು



ನನ್ನ ಮಗ, ಸಚಿವ ಡಾ. ಯತೀಂದ್ರ ಅವರು ಪೂಜೆ ಮಾಡದೆ ಆಹಾರ ಮುಟ್ಟುವುದಿಲ್ಲ, ನೀರನ್ನೂ ಕುಡಿಯುವುದಿಲ್ಲ. ಇಂತಹ ನಂಬಿಕೆಗಳನ್ನು ಹುಟ್ಟುಹಾಕಿರುವುದು ಮನುವಾದಿಗಳು, ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದ್ದಾರೆ. ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ ದಾಸ್ ಅವರ 'ಮೆಮೊರಬಲ್ ಟ್ರಯಲ್ಸ್' ಪುಸ್ತಕವನ್ನು ಬಿಡುಗಡೆ ಮಾಡಿದ ಬಳಿಕ ಮಾತನಾಡಿದ ಸಿದ್ದರಾಮಯ್ಯ, ವೈದ್ಯರು, ಇಂಜಿನಿಯರ್‌ಗಳು, ಪ್ರಾಧ್ಯಾಪಕರು, ವಿಜ್ಞಾನಿಗಳು, ತಂತ್ರಜ್ಞರು ಕೂಡ ಮೂಢನಂಬಿಕೆಗಳನ್ನು ಅನುಸರಿಸುತ್ತಿದ್ದಾರೆ. ನನ್ನ ಮಗ (ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ) ವೈದ್ಯರಾಗಿದ್ದರೂ ಪ್ರತಿದಿನ ಪೂಜೆ ಮಾಡುತ್ತಾರೆ. ನಾನು ಮಾಡುವುದಿಲ್ಲ. ಏನು ಮಾಡುವುದು ಅವರು ಪೂಜೆ ಮಾಡದೆ ಊಟ ಮಾಡುವುದಿಲ್ಲ, ನೀರು ಕುಡಿಯುವುದಿಲ್ಲ. ಅದು ಅವರ ನಂಬಿಕೆ. ಆದರೆ ಇಂತಹ ನಂಬಿಕೆಗಳನ್ನು ಸೃಷ್ಟಿಸಿದ್ದು ಮನುವಾದಿಗಳು ಎಂದರು. ದೇವರ ಅಸ್ತಿತ್ವದ ಬಗ್ಗೆ ಸಂಶಯ ವ್ಯಕ್ತಪಡಿಸುತ್ತಿರುವ ಸಿದ್ದರಾಮಯ್ಯ ಅವರು, ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಮೊದಲ ಬಾರಿಗೆ ರಾಜಕೀಯೇತರ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಪೊಲೀಸರು ಡೀಲ್- ಅಪರಾಧಗಳಲ್ಲಿ ಭಾಗಿಯಾಗಬೇಡಿ: ಸಿಎಂ

## ಸಾಧನೆ ಸಾಮರ್ಥ್ಯಕ್ಕಿಂತ ನಿಮ್ಮ ಗುರಿ ನಿರ್ಧಾರ ಮಾಡಿದಾಗ ಜಯ ನಿಮ್ಮದಾಗಲಿದೆ ಎಂದರು

• ಉದಯವಾಹಿನಿ, ಬೆಂಗಳೂರು

ಯಾವುದೇ ಪೊಲೀಸ್ ಅಧಿಕಾರಿಗಳು ಡೀಲ್‌ಗಳು ಹಾಗೂ ಅಪರಾಧಗಳಲ್ಲಿ ಭಾಗಿಯಾಗಬಾರದು. ಇಂತಹ ವಿಚಾರದಲ್ಲಿ ಭಾಗಿಯಾದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಇದು ನನ್ನ ಮನವಿ ಎಂದಾದರೂ ಭಾವಿಸಿ, ಸೂಚನೆ ಎಂದಾದರೂ ತಿಳಿದುಕೊಳ್ಳಿ ಎಂದು ಸಿಎಂ ಡಿ ಕೆ ಶಿವಕುಮಾರ್ ಹೇಳಿದ್ದಾರೆ.

ವಿಧಾನಸೌಧದ ಆವರಣದಲ್ಲಿ ಶನಿವಾರ ನಡೆದ ರಾಜ್ಯದ ಜಿಲ್ಲಾ ಘಟಕಗಳಿಗೆ 32 ಅತ್ಯಾಧುನಿಕ ಮೊಬೈಲ್ ಫೊರೆನ್ಸಿಕ್ ವ್ಯಾನ್ ಗಳು ಹಾಗೂ 75 ಬೊಲೆರೋ ವಾಹನಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ನಮ್ಮ ಪೊಲೀಸರು ಒಂದು ವರ್ಷದಲ್ಲಿ 375 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಪೊಲೀಸ್ ಇಲಾಖೆ ಅಧಿಕಾರಿಗಳು 1500 ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿದ್ದು, ಇದು ದೊಡ್ಡ ದಾಖಲೆ. ಇಡೀ ದೇಶ ಕರ್ನಾಟಕವನ್ನು ಗಮನಿಸುತ್ತಿದೆ. ಡ್ರಗ್ಸ್ ಜಾಲವನ್ನು ಬೇಧಿಸಿದ ತಂಡಕ್ಕೆ ಸರ್ಕಾರ 10 ಲಕ್ಷದ ನಗದು ಬಹುಮಾನ ನೀಡಲು ತೀರ್ಮಾನಿಸಿದೆ. ಎಲ್ಲಾ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಪ್ರತಿಯೊಬ್ಬ ನಾಗರಿಕನೂ ಇಲಾಖೆ ಮೇಲೆ ಗೌರವ ಇಟ್ಟುಕೊಳ್ಳುವಂತೆ ಕೆಲಸ ಮಾಡಬೇಕು. ನಿಮ್ಮ ಯಶಸ್ಸೇ ಸರ್ಕಾರದ ಯಶಸ್ಸು ಎಂದು ತಿಳಿಸಿದರು.

ಇತ್ತೀಚೆಗೆ ಕೇರಳ ಗೃಹಸಚಿವರಾದ ರಮೇಶ್ ಚೆನ್ನಿತ್ತಾಲ ಅವರು ನನ್ನನ್ನ ಭೇಟಿ ಮಾಡಿ ಕರ್ನಾಟಕ ಗಡಿ ದಾಟಿ ಯಾವುದೇ ಮಾದಕ ವಸ್ತು ಕೇರಳ ಗಡಿ ಮೂಲಕ ಹೋಗಬಾರದು ಎಂಬ ವಿಚಾರವಾಗಿ ಕೆಲವು ಮಾಹಿತಿ ಹಾಗೂ ಮನವಿ ನೀಡಿದ್ದಾರೆ. ನಮ್ಮ ರಾಜ್ಯದಲ್ಲಿ ಮಾದಕ ವಸ್ತು ಬರದಂತೆ ತಡೆಯಲಾಗುವುದು ಎಂದು ಅವರಿಗೆ ಆಶ್ವಾಸನೆ ನೀಡಿದ್ದೇನೆ ಎಂದು ತಿಳಿಸಿದರು.

ನಮ್ಮ ಪೊಲೀಸ್ ಇಲಾಖೆಗೆ ದೇಶದಲ್ಲೇ ದಕ್ಷ ಇಲಾಖೆ ಎಂದು ಹೆಸರು ಪಡೆದಿದೆ. ಪೊಲೀಸ್ ಸಿಬ್ಬಂದಿಗಳ ಪರಿಶ್ರಮ, ನಿಷ್ಠೆ, ಕಾರ್ಯಕ್ಷಮತೆಯಿಂದ ಈ ಹೆಸರು ಬಂದಿದೆ. ಹಗಲು ರಾತ್ರಿ ನಿಮ್ಮ ಸೇವೆಗೆ ಸರ್ಕಾರ ನಿಮ್ಮ ಪರವಾಗಿ ನಿಲ್ಲಲಿದೆ. ಕೆಲವು ಸಂದರ್ಭದಲ್ಲಿ ಅನಾಹುತಗಳು ಆಗುತ್ತವೆ. ಅಂತಹ ಪರಿಸ್ಥಿತಿಯಲ್ಲೂ ನಾನು ಹಾಗೂ ನಮ್ಮ ಸರ್ಕಾರ ನಿಮ್ಮ ಆತ್ಮಸ್ಥೈರ್ಯ ಕುಸಿಯದಂತೆ ನೋಡಿಕೊಳ್ಳಲಾಗಿದೆ. ಕಾನೂನು ಕಾಯುತ್ತೀರಿ, ಸಮಾಜದ ಹಿತ ಕಾಪಾಡುತ್ತೀರಿ. ಅಪರಾಧಗಳಲ್ಲಿ ವಿವಿಧ ರೂಪಗಳಿವೆ. ತಂತ್ರಜ್ಞಾನ,



ಬಂದ ಬಳಿಕ ಅಪರಾಧ ಪತ್ತೆಹಚ್ಚಲು ಅನೇಕ ಕ್ರಮ ಕೈಗೊಳ್ಳಲಾಗಿದೆ. ಗೂಂಡಾಗಿರಿ ತಡೆಗಟ್ಟಲು, ಎಲ್ಲಾ ಠಾಣೆಗಳಲ್ಲಿ ಪಡೆ ರಚಿಸಲು ನಿರ್ದೇಶನ ನೀಡಿದ್ದೇನೆ'' ಎಂದರು.

ರಾಮಮಂದಿರದಲ್ಲಿ ಯಾವ ರೀತಿ ಕಳ್ಳತನವಾಗಿದೆ ಎಂದು ಗಮನಿಸಿದ್ದೀರಿ. ನಮ್ಮ ರಾಜ್ಯದಲ್ಲಿ ಮುಂಜಾಗ್ರತೆಯಿಂದ ಮುಜರಾಯಿ ಇಲಾಖೆಯ ಎಲ್ಲಾ ದೇವಾಲಯಗಳಲ್ಲಿ ಸ್ಥಳೀಯ ಮುಖಂಡರು, ಪೊಲೀಸ್ ಅಧಿಕಾರಿಗಳು ಸೇರಿ ಹುಂಡಿ ತೆಗೆಯುವುದರಿಂದ, ಹಣ ಏಣಿಕೆ ಮಾಡುವುದು ಸೇರಿ ಅವುಗಳನ್ನು ಬ್ಯಾಂಕಿಗೆ ಸಲ್ಲಿಸುವವರೆಗೂ ಎಲ್ಲವನ್ನು ವಿಡಿಯೋ ದಾಖಲಾತಿ ಮಾಡಬೇಕು ಎಂದು ಮಾರ್ಗದರ್ಶನ ನೀಡಿದ್ದೇನೆ. ಇದರ ಬಗ್ಗೆ ಬೆಳಗಾವಿಯಲ್ಲಿ ಘೋಷಣೆ ಮಾಡಲಾಗಿದೆ.

> ಪ್ರಿಯಾಂಕ್ ಖರ್ಗೆ ಅವರು ಈ ಇಲಾಖೆ ಬಗ್ಗೆ ಬಹಳ ಆಸಕ್ತಿ ಹೊಂದಿದ್ದರು. ಕಳೆದ ಸರ್ಕಾರದ ಅವಧಿಯಲ್ಲಿ ಪಿಎಸ್‌ಐ ಹಗರಣವನ್ನು ತಮ್ಮದೇ ಆದ ರೀತಿ ತನಿಖೆ ಮಾಡಿ ಸರ್ಕಾರ ಹಾಗೂ ಜನರ ಗಮನ ಸೆಳೆದಿದ್ದರು. ನೇಮಕಾತಿಯಲ್ಲಿ ಪಾರದರ್ಶಕತೆ ಇರಬೇಕು, ಯಾರೊಬ್ಬರೂ ಲಂಚ ಕೊಟ್ಟು ಕೆಲಸಕ್ಕೆ ಸೇರಬಾರದು. -ಸಿಎಂ ಡಿ ಕೆ ಶಿವಕುಮಾರ್

> ಇದು ನಮ್ಮ ಪೊಲೀಸ್ ಇಲಾಖೆಗೆ ಹೊಸ ಶಕ್ತಿ ತುಂಬಲಾಗುತ್ತಿದೆ. ಗಡಿಯಲ್ಲಿ ಸೈನಿಕ, ಗಡಿಯೊಳಗೆ ಆರಕ್ಷಕ. ಈ ಇಬ್ಬರಿಂದ ನಮ್ಮ ರಾಜ್ಯ ಹಾಗೂ ದೇಶ ನೆಮ್ಮದಿಯಾಗಿ ಬದುಕಲು ಸಾಧ್ಯವಾಗುತ್ತಿದೆ. ನಿಮಗೆ ಸರ್ಕಾರದ ಪರವಾಗಿ ಅಭಿನಂದನೆಗಳು. ಸಾಧನೆ ಸಾಮರ್ಥ್ಯಕ್ಕಿಂತ ನಿಮ್ಮ ಗುರಿ ನಿರ್ಧಾರ ಮಾಡಿದಾಗ ಜಯ ನಿಮ್ಮದಾಗಲಿದೆ ಎಂದರು.
> -ಸಿಎಂ ಡಿ ಕೆ ಶಿವಕುಮಾರ್

**ಕರ್ತವ್ಯ ಸರಿಯಾಗಿ ನಿಭಾಯಿಸಿ** ಅರ್ಹತೆಯೇ ಹುದ್ದೆಯ ನೇಮಕಾತಿಗೆ ಮುಖ್ಯ ಮಾನದಂಡ ಎಂಬ ಅಭಿಪ್ರಾಯ ಹಾಕಿದ್ದಾರೆ. ಸರ್ಕಾರ ನಿಮ್ಮ ಜೊತೆ ಇರುತ್ತದೆ. ನೀವು ನಿಮ್ಮ ಕರ್ತವ್ಯನ್ನು ಸರಿಯಾಗಿ ನಿಭಾಯಿಸಿ ಎಂದು ಕಿವಿಮಾತು ಹೇಳಿದರು.

## ಡಿಕೆಶಿ ಎಂದರೆ ಟೆಂಡರ್, ಸಿಎಂ ಕುರ್ಚಿಯನ್ನು ಟೆಂಡರ್‌ನಲ್ಲೇ ಖರೀದಿಸಿದ್ದಾರೆ: ಅಶೋಕ

ರಾಜ್ಯದಲ್ಲಿರುವುದು ಟೆಂಡರ್ ಸರ್ಕಾರ, ಟೆಂಡರ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಗಾದಿಯನ್ನು ರಾಹುಲ್ ಗಾಂಧಿ ಅವರಿಂದ ಟೆಂಡರ್ ಮೂಲಕ ಪಡೆದುಕೊಂಡಿದ್ದಾರೆ. 3 ಸಾವಿರ ಕೋಟಿಯಿಂದ 4 ಸಾವಿರ ಕೋಟಿ ಕೊಡುವುದಾಗಿ ಹೇಳಿಬಂದಿದ್ದಾರೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ ದೂರಿದರು.

ಡಿಕೆಶಿ ಎಂದರೆ ಟೆಂಡರ್ ಕುರ್ಚಿಯನ್ನೂ ಟೆಂಡರ್‌ನಲ್ಲೇ ಖರೀದಿಸಿದ್ದಾರೆ. ಈಗ ಎಲ್ಲದಕ್ಕೂ ಟೆಂಡರ್ ಕರೆಯಲಾಗುತ್ತಿದೆ. ನನಗಿರುವ ಮಾಹಿತಿ ಪ್ರಕಾರ, ಕಾಂಗ್ರೆಸ್ ನೇತೃತ್ವದ ಸರ್ಕಾರದಲ್ಲಿ ಈವರೆಗೆ 60ಸಾವಿರ ಎಕರೆ ಭೂಸ್ವಾಧೀನಕ್ಕೆ ಅಧಿಸೂಚನೆ ಮಾಡಲಾಗಿದೆ. ಮುಂದಿನ ಯಾವ ಮುಖ್ಯಮಂತ್ರಿಯೂ ಯಾವ ಟೆಂಡರ್ ಕೂಡ ಕರೆಯಲಾಗುವುದಿಲ್ಲ, ಅಷ್ಟೊಂದನ್ನು ಈಗಾಗಲೇ ಕರೆಯಲಾಗಿದೆ ಎಂದು ವಾಗ್ದಾಳಿ ನಡೆಸಿದರು.

ಡಿಕೆಶಿ ಮುಖವಾಡದ ಸಿಎಂ ಎಂದು ದೂರಿದ ಅವರು, ವಿಭೂತಿ, ನಾಮ ಹಾಕುತ್ತಾರೆ. ರಾಜ್ಯಕ್ಕೆ ನಾಮ ಹಾಕುತ್ತಿರುವ ವ್ಯಕ್ತಿ ಅವರು. ಹೃದಯದ ತುಂಬೆಲ್ಲಾ ಅಲ್ಪಸಂಖ್ಯಾತರು, ಬಾಂಗ್ಲಾದೇಶದವರ ಬಗ್ಗೆ ಪ್ರೀತಿ ಇಟ್ಟುಕೊಂಡಿದ್ದಾರೆ. ಇದಕ್ಕಾಗಿ ಪಿಆರ್‌ಸಿ (ಶಾಶ್ವತ ನಿವಾಸಿ ಪ್ರಮಾಣಪತ್ರ) ನೀಡುವ ಕೆಲಸ ಮಾಡುತ್ತಿದ್ದಾರೆ.

ವೋಟ್ ಬ್ಯಾಂಕ್ ಗಟ್ಟಿಮಾಡಿಕೊಳ್ಳಲು ಬಾಂಗ್ಲಾದೇಶದವರಿಗಾಗಿ ಮಾಡಿರುವ ಸೀಂ ಇದು. ಕೂಡಲೇ ಈ ಆದೇಶವನ್ನು ವಾಪಸ್ ಪಡೆದುಕೊಳ್ಳಬೇಕು' ಎಂದು ಆಗ್ರಹಿಸಿದರು. 'ರಾಜ್ಯ ಸರ್ಕಾರಕ್ಕೆ ಅಧಿಕಾರ ಇಲ್ಲದಿದ್ದರೂ ಪಿಆರ್‌ಸಿ ಮಾಡಿಸುತ್ತಿದ್ದಾರೆ. ಬಾಂಗ್ಲಾದವರಿಗಾಗಿ ನಡೆಸುತ್ತಿರುವ 'ಕೌಂಟರ್ ಎಸ್‌ಐಆರ್' ಇದಾಗಿದೆ. ಕೇಂದ್ರದ ಕಾನೂನು ತಿರುಚುವ ಕೆಲಸವನ್ನು ಮಾಡಲಾಗುತ್ತಿದೆ.

**1** ಹುಂಡಿ ರಕ್ಷಣೆಗೆ ತೀರ್ಮಾನ
**2** ತಮ್ಮದೇ ಆದ ರೀತಿ ತನಿಖೆ
**3** ವರ್ಷದಲ್ಲಿ



## ವಿಚ್ಛೇದನವಾಗದ ಮೊದಲ ಪತ್ನಿ ಜೀವಂತವಾಗಿರುವಾಗ ನಡೆಯುವ ಎರಡನೇ ವಿವಾಹ 'ಅಸಿಂಧು': ಹೈಕೋರ್ಟ್

• ಉದಯವಾಹಿನಿ, ಬೆಂಗಳೂರ

ಮೊದಲ ಪತ್ನಿಯೊಂದಿಗೆ ಕಾನೂನಾತ್ಮಕವಾಗಿ ವಿಚ್ಛೇದನ ಪಡೆಯುವ ಮುನ್ನವೇ ನಡೆದ ಎರಡನೇ ವಿವಾಹವು ಕಾನೂನಿನ ಪ್ರಕಾರ ಅಸಿಂಧುವಾಗಲಿದೆ ಎಂದು ಹೈಕೋರ್ಟ್ ಆದೇಶಿಸಿದೆ.

ತುಮಕೂರಿನ ಕುವೆಂಪು ನಗರದ ನಿವಾಸಿ ಮಹಿಳೆ ಸಲ್ಲಿಸಿದ್ದ ಎರಡು ಪ್ರತ್ಯೇಕ ಮರು ಪರಿಶೀಲನಾ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಡಿ.ಕೆ. ಸಿಂಗ್ ಮತ್ತು ನ್ಯಾಯಮೂರ್ತಿ ಟಿ.ಎಂ. ನದಾಫ್ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದೆ. ಅಲ್ಲದೇ, ಹಿಂದೂ ವಿವಾಹ ಕಾಯ್ದೆ 1955ರ ಸೆಕ್ಷನ್ 5 ಮತ್ತು 11ರ ಪ್ರಕಾರ, ಮೊದಲ ಪತ್ನಿ ಜೀವಂತವಾಗಿರುವಾಗ ಅಥವಾ ವಿಚ್ಛೇದನ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನ ನಡೆಯುವ ಯಾವುದೇ ಎರಡನೇ ವಿವಾಹವು ಅಸಿಂಧುವಾಗಲಿದೆ ಇದಕ್ಕೆ ಪ್ರತ್ಯೇಕ ದಾವೆ ಹೂಡುವ ಅಗತ್ಯವಿಲ್ಲ ಎಂದು ಪೀಠ ಹೇಳಿದೆ.

ಅಲ್ಲದೇ, ಪ್ರಕರಣ ಸಂಬಂಧ ತುಮಕೂರಿನ ಕೌಟುಂಬಿಕ ನ್ಯಾಯಾಲಯವು, ಇಬ್ಬರ ವಿವಾಹವು 2018ರ ನವೆಂಬರ್ 21ರಂದೇ ನಡೆದಿರುವುದು ಸತ್ಯ ಮತ್ತು ಆ ಸಮಯದಲ್ಲಿ ಪತಿಯ ಮೊದಲ ಪತ್ನಿ ಜೀವಂತವಾಗಿದ್ದರಿಂದ ಈ ಮದುವೆ ಅಸಿಂಧು ಎಂದು ಒಪ್ಪಿಕೊಂಡಿದೆ.

ವಿಚ್ಛೇದನ ಅರ್ಜಿಗಳು ಕಾನೂನುಬದ್ಧವಾಗಿ ಮಾನ್ಯವಲ್ಲ ಎಂದು ತಿಳಿಸಿ ಅದರ ನಡುವೆಯೂ ವಿವಾಹ ರದ್ದತಿಗಾಗಿ ಅರ್ಜಿದಾರರು ಪ್ರತ್ಯೇಕ ಸಿವಿಲ್




ಪ್ರಕರಣ ದಾಖಲಿಸಿಕೊಳ್ಳಬಹುದು ಎಂದು ನಿರ್ದೇಶನ ನೀಡಿದೆ ಈ ಆದೇಶ ಕಾನೂನು ಬಾಹಿರ ಎಂದು ಪೀಠ ಹೇಳಿದೆ.

ಪತ್ನಿಯ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಪೀಠ, ಈ ವಿವಾಹವನ್ನು ಸಂಪೂರ್ಣ ಅಸಿಂಧು ಎಂದು ಘೋಷಣೆ ಮಾಡಿ ಅರ್ಜಿದಾರರಿಗೆ ಸಲ್ಲಬೇಕಾದ ಮಾಸಿಕ ಪರಿಹಾರ ಹಾಗೂ ಜೀವನಾಂಶಕ್ಕಾಗಿ ಕೆಳಹಂತದ ನ್ಯಾಯಾಲಯದಲ್ಲಿ ಪ್ರತ್ಯೇಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪೀಠ ಹೇಳಿದೆ.

## ನದಿ ಜೋಡಣೆ ಯೋಜನೆ ಬಗ್ಗೆ ಅಧ್ಯಯನ ಮಾಡಿ ಘೋಷಣೆ ಮಾಡಿ': ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕಾವೇರಿಕೃಷ್ಣಾಗೋದಾವರಿ ನದಿ ಜೋಡಣೆ ಯೋಜನೆಗೆ ರಾಜ್ಯದ ಒಪ್ಪಿಗೆ ನೀಡಿರುವುದಾಗಿ ಹೇಳಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ನದಿ ಜೋಡಣೆ ಯೋಜನೆಗೆ ಒಪ್ಪಿಗೆ ನೀಡಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ಆದರೆ, ವಾಸ್ತವಾಂಶ ತಿಳಿಯದೆ ಇಂತಹ ಹೇಳಿಕೆಗಳನ್ನು ನೀಡುವುದು ರಾಜ್ಯದ ಹಿತಾಸಕ್ತಿಗೆ ಧಕ್ಕೆ ತರುತ್ತದೆ.

ಈ ಯೋಜನೆಯಲ್ಲಿ ಕರ್ನಾಟಕಕ್ಕೆ ಹೆಚ್ಚಿನ ನೀರಿನ ಪಾಲು ಸಿಗಬೇಕು ಎಂಬುದು ನಮ್ಮ ಬೇಡಿಕೆ. ಅದಕ್ಕಾಗಿ ಅಗತ್ಯವಿದ್ದರೆ ಕಾನೂನು ಹೋರಾಟವನ್ನೂ ನಡೆಸಬೇಕು ಎಂದು ಹೇಳಿದರು.

ಬರಗಾಲ ಪರಿಶೀಲನಾ ಸಭೆಗಳ ಹೆಸರಿನಲ್ಲಿ ರಾಜ್ಯಾದ್ಯಂತ



ಪ್ರವಾಸ ಮಾಡುತ್ತಿರುವ ಮುಖ್ಯಮಂತ್ರಿ, ನೀರಿನ ವಿಷಯದಲ್ಲಿ ಮಾತ್ರ ಬೇಜವಾಬ್ದಾರಿಯಾಗಿ ವರ್ತಿಸುತ್ತಿದ್ದಾರೆ.

ಕೃಷ್ಣಾಕಾವೇರಿಗೋದಾವರಿ ನದಿ ಜೋಡಣೆ ಕುರಿತು ಅವರು ನೀಡಿರುವ ಹೇಳಿಕೆ ನೋಡಿದರೆ, ರಾಜ್ಯ ಎದುರಿಸುತ್ತಿರುವ ಜಲ ವಿವಾದಗಳ ಬಗ್ಗೆ ಅವರಿಗೆ ಕನಿಷ್ಠ ಅರಿವೂ ಇಲ್ಲ ಎಂಬುದು ಸ್ಪಷ್ಟವಾಗುತ್ತದೆ ಎಂದು ಕುಮಾರಸ್ವಾಮಿ ಟೀಕಿಸಿದರು.ನನಗೆ ನದಿ ಜೋಡಣೆ ಯೋಜನೆಗೆ ಯಾವುದೇ ವಿರೋಧವಿಲ್ಲ. ಯೋಜನೆ ಜಾರಿಯಾಗಬೇಕು. ಆದರೆ, ಕಾವೇರಿ ಮತ್ತು ಗೋದಾವರಿ ನದಿಗಳನ್ನು ಜೋಡಿಸಿದರೆ ಕರ್ನಾಟಕಕ್ಕೆ ಎಷ್ಟು ನೀರು ಸಿಗಲಿದೆ ಎಂಬುದನ್ನು ಮೊದಲು ಮುಖ್ಯಮಂತ್ರಿ ತಿಳಿದುಕೊಳ್ಳಬೇಕು.

ಈ ಕುರಿತು ಸಂಬಂಧಪಟ್ಟ ಇಂಜಿನಿಯರ್‌ಗಳು ಮತ್ತು ರಾಜ್ಯದ ಪರವಾಗಿ ವಕಾಲತ್ತು ನಡೆಸುತ್ತಿರುವ ವಕೀಲರಿಂದ ಮಾಹಿತಿ ಪಡೆದು ಮಾತನಾಡಬೇಕು ಎಂದು ಸಲಹೆ ನೀಡಿದರು.
ಯೋಜನೆಯಿಂದ ಕರ್ನಾಟಕಕ್ಕೆ ಎಷ್ಟು ನೀರು ದೊರೆಯುತ್ತದೆ ಎಂಬುದು ಸ್ಪಷ್ಟವಾಗದೆ ಇರುವಾಗಲೇ ಒಪ್ಪಿಗೆ ನೀಡಿರುವುದು ಕನ್ನಡಿಗರಿಗೆ ಆಗಿರುವ ದೊಡ್ಡ ಅನ್ಯಾಯ ಎಂದು ಅವರು ಆರೋಪಿಸಿದರು.

## ತಾಯಿ, ಅಜ್ಜಿ, ಮಾವನನ್ನು ಕೊಂದು ಆರೋಪಿ ಆತ್ಮಹತ್ಯೆ!

• ಉದಯವಾಹಿನಿ, ಬೆಂಗಳೂರ

ತಾಯಿ, ಅಜ್ಜಿ ಹಾಗೂ ಮಾವನನ್ನು ಕೊಂದು ಯುವಕ ಸಹ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣಾ ವ್ಯಾಪ್ತಿಯ ಕೊಟ್ಟಿಗೆಪಾಳ್ಯದಲ್ಲಿ ಶನಿವಾರ ಬೆಳಿಗ್ಗೆ ನಡೆದಿದೆ. ತಾಯಿ ಮಂಗಳಮ್ಮ, ಅಜ್ಜಿ ನಂಜಮ್ಮ ಮತ್ತು ಮಾವ ಸತೀಶ ಅವರನ್ನು ಪ್ರಶಾಂತ್ ಎಂಬಾತ ಕೊಲೆ ಮಾಡಿದ್ದಾನೆ. ಕೃತ್ಯ ಎಸಗಿದ ಬಳಿಕ ಆತನೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಸ್ಥಳಕ್ಕೆ ಕಾಮಾಕ್ಷಿಪಾಳ್ಯ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

ಮಂಗಳಮ್ಮ ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡುತ್ತಿದ್ದರು. ನಂಜಮ್ಮ ಪೌರಕಾರ್ಮಿಕರಾಗಿದ್ದರು. ಸತೀಶ್ ಪ್ಲಂಬರ್ ಕೆಲಸ ಮಾಡುತ್ತಿದ್ದರು. ಕೃತ್ಯ ಎಸಗಿದ ಆರೋಪಿ ಕ್ಯಾಬ್ ಚಾಲಕನಾಗಿ ಕೆಲಸ ಮಾಡುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಕುಟುಂಬಸ್ಥರೆಲ್ಲರು ಕಳೆದ ಏಳೆಂಟು ವರ್ಷದಿಂದ ಕೊಟ್ಟಿಗೆಪಾಳ್ಯದ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು. ಆರೋಪಿ ಪ್ರಶಾಂತ್ ಕಳೆದ ಒಂದು ವರ್ಷದಿಂದ ಕೆಲಸಕ್ಕೆ ಹೋಗಿರಲಿಲ್ಲ, ತಂದೆ ಕೆಲಸಕ್ಕೆ ಹೋಗಿದ್ದಾಗ ಪ್ರಶಾಂತ್ ಮೂವರನ್ನ ಕೊಚ್ಚಿ ಕೊಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ. ಘಟನೆಗೆ ಕಾರಣ ಗೊತ್ತಾಗಿಲ್ಲ.

ಕೃತ್ಯ ಎಸಗಿದ ಬಳಿಕ ಆರೋಪಿ ಪರಾರಿಯಾಗಲು ಯತ್ನಿಸಿದ್ದ. ಮನೆ ಮಾಲೀಕರು ಹಾಗೂ ಸ್ಥಳೀಯರು ಆರೋಪಿಯನ್ನು ಹಿಡಿದು ಕೊಠಡಿಯಲ್ಲಿ ಕೂಡಿ ಹಾಕಿದ್ದರು.

# ಜಮೀರ್ ಅಹ್ಮದ್ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಬೆನ್ನಲ್ಲೇ ಐಪಿಎಸ್ ಅಧಿಕಾರಿ ವರ್ಗ!

## ಸಂಸ್ಥೆಯ ಆಡಳಿತಾತ್ಮಕ ಅನುಕೂಲಕ್ಕಾಗಿ ಅವರನ್ನು ಮೂಲ ಇಲಾಖೆಗೆ ಕಳುಹಿಸಲಾಗಿದೆ

• ಉದಯವಾಹಿನಿ, ಬೆಂಗಳೂರು

**1** ಸೂಕ್ಷ್ಮ ಹಾಗೂ ಹೈ-ಪ್ರೊಫೈಲ್
**2** 20 ಕೋಟಿ ರೂಪಾಯಿ ಮೌಲ್ಯ
**3** ಮದ್ಯ ಮಾರಾಟ ಪರವಾನಗಿ

ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ಅವರ ವಿರುದ್ಧ ಸುಮಾರು 20 ಕೋಟಿ ರೂಪಾಯಿ ಮೌಲ್ಯದ ಆದಾಯ ಮೀರಿ ಆಸ್ತಿ (ಆಂ) ಹೊಂದಿರುವ ಆರೋಪಕ್ಕೆ ಸಂಬಂಧಿಸಿದಂತೆ ಆರೋಪಪಟ್ಟಿ ಸಲ್ಲಿಸಲು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಅನುಮತಿ ಕೋರಿ ಲೋಕಾಯುಕ್ತ ಪೊಲೀಸರು ಪತ್ರ ಬರೆದ ಮರುದಿನವೇ, ಲೋಕಾಯುಕ್ತ ಐಪಿಎಸ್ ಅಧಿಕಾರಿ ಶಿವಪ್ರಕಾಶ್ ದೇವರಾಜು ಅವರನ್ನು ಬೆಂಗಳೂರು ನಗರ ಲೋಕಾಯುಕ್ತ ಪೊಲೀಸ್ ಅಧೀಕ್ಷಕ-1 (ಎಸ್‌ಪಿ-1) ಹುದ್ದೆಯಿಂದ ಬಿಡುಗಡೆಗೊಳಿಸಿದೆ. ಅವರನ್ನು ಮೂಲ ಇಲಾಖೆಗೆ ಮತ್ತೆ ಕಳುಹಿಸಲಾಗಿದೆ.

ಲೋಕಾಯುಕ್ತದಲ್ಲಿ ಒಂದು ವರ್ಷಕ್ಕೂ ಕಡಿಮೆ ಅವಧಿ ಸೇವೆ ಸಲ್ಲಿಸಿದ್ದ ಶಿವಪ್ರಕಾಶ್ ದೇವರಾಜು ಅವರು ನಿನ್ನೆ ಬೆಳಗ್ಗೆ 10.30ಕ್ಕೆ ಕಚೇರಿಗೆ ಆಗಮಿಸಿದ ವೇಳೆ ವರ್ಗಾವಣೆ ಆದೇಶವನ್ನು ಸ್ವೀಕರಿಸಿದರು.

ಅದರ ಹಿಂದಿನ ದಿನವೇ, 2022ರಲ್ಲಿ ಜಾರಿ ನಿರ್ದೇಶನಾಲಯ ಜಮೀರ್ ಅಹ್ಮದ್ ನಿವಾಸದ ಮೇಲೆ ನಡೆಸಿದ್ದ ದಾಳಿಯಲ್ಲಿ ದೊರೆತ ಮಾಹಿತಿಯ ಆಧಾರದ ಮೇಲೆ ದಾಖಲಾದ ಡಿಎ ಪ್ರಕರಣದ ತನಿಖೆಯನ್ನು ಶಿವಪ್ರಕಾಶ್ ನೇತೃತ್ವದ ತಂಡ



ಪೂರ್ಣಗೊಳಿಸಿತ್ತು. ಬಳಿಕ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಲೋಕಾಯುಕ್ತ ಪೊಲೀಸರು ರಾಜ್ಯಪಾಲರಿಗೆ ಪತ್ರ ಬರೆದಿದ್ದರು. ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 15(4)ರ ಪ್ರಕಾರ, ಲೋಕಾಯುಕ್ತದ ಅಧಿಕಾರಿಗಳು ಹಾಗೂ ಸಿಬ್ಬಂದಿ ಆಡಳಿತಾತ್ಮಕ ಶಿಸ್ತು ನಿಯಂತ್ರಣದ ವ್ಯಾಪ್ತಿಗೆ ಒಳಪಡುತ್ತಾರೆ.2014ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿರುವ ಶಿವಪ್ರಕಾಶ್ ದೇವರಾಜು, 2025ರ ಜುಲೈ 30ರಂದು ಭ್ರಷ್ಟಾಚಾರ ನಿಗ್ರಹ ಸಂಸ್ಥೆಯಲ್ಲಿ ಸೇವೆ ಸಲ್ಲಿಸುವ ಆಸಕ್ತಿ ವ್ಯಕ್ತಪಡಿಸಿ ಪತ್ರ ಬರೆದ ಬಳಿಕ ಲೋಕಾಯುಕ್ತ ಎಸ್‌ಪಿ-1 ಆಗಿ ನೇಮಕಗೊಂಡಿದ್ದರು. ಮೂಲಗಳ ಪ್ರಕಾರ, ಅವರು ಹಲವು ಸೂಕ್ಷ್ಮ ಹಾಗೂ ಹೈ-ಪ್ರೊಫೈಲ್ ಪ್ರಕರಣಗಳ ತನಿಖೆ ನಡೆಸಿದ್ದರು. ಲೋಕಾಯುಕ್ತ ದಾಳಿ ನಡೆಯುವ ಮಾಹಿತಿ ಸೋರಿಕೆ ಮಾಡಿ ಸರ್ಕಾರಿ ಅಧಿಕಾರಿಗಳಿಂದ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ಆರೋಪಕ್ಕೆ ಕಡಿವಾಣ ಹಾಕುವಲ್ಲಿಯೂ ಅವರು ಪ್ರಮುಖ ಪಾತ್ರವಹಿಸಿದ್ದರು. ಅವರ ನೇತೃತ್ವದಲ್ಲಿ ನಡೆದ ಪ್ರಮುಖ ಕಾರ್ಯಾಚರಣೆಗಳಲ್ಲಿ, ಕಳೆದ ಜುಲೈ 7ರಂದು ಬೆಂಗಳೂರು ವಿಶೇಷ ಉಪ ಆಯುಕ್ತ ಎಂ.ಕೆ. ಜಗದೀಶ್ ಹಾಗೂ ಇತರ ಇಬ್ಬರು ಅಧಿಕಾರಿಗಳ ಕಚೇರಿ ಮತ್ತು ನಿವಾಸಗಳ ಮೇಲೆ ನಡೆದ ದಾಳಿ ಪ್ರಮುಖವಾಗಿತ್ತು.

> ಲೋಕಾಯುಕ್ತದಲ್ಲಿ ನಾನು ಮಾಡಿದ ಕೆಲಸದ ಬಗ್ಗೆ ನನಗೆ ತೃಪ್ತಿ ಇದೆ. ಇದು ಅಲ್ಪಾವಧಿಯ ಸೇವೆಯಾಗಿತ್ತು. ಇನ್ನೂ ಸಾಕಷ್ಟು ಕೆಲಸ ಮಾಡಬೇಕಿತ್ತು ಎಂದು ಶಿವಪ್ರಕಾಶ್ ದೇವರಾಜು ಹೇಳಿದ್ದಾರೆ.

### ಪ್ರಾಸಿಕ್ಯೂಷನ್‌ಗೆ ಅನುಮತಿ

ಭ್ರಷ್ಟ ಅಧಿಕಾರಿಗಳನ್ನು ಪತ್ತೆಹಚ್ಚಲು ಕೃತಕ ಬುದ್ಧಿಮತ್ತೆ ಬಳಸಿ ಇಲಾಖೆವಾರು ಮಾಹಿತಿ ಸಂಗ್ರಹ (ಡಾಸಿಯರ್) ಸಿದ್ಧಪಡಿಸಿದ್ದ ಮೊದಲ ಅಧಿಕಾರಿಯಾಗಿಯೂ ಅವರು ಗುರುತಿಸಿಕೊಂಡಿದ್ದರು. ಭ್ರಷ್ಟ ಅಧಿಕಾರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಹಲವು ಪ್ರಸ್ತಾವನೆಗಳನ್ನು ಕಳುಹಿಸಿದ್ದರು ಎಂದು ಮೂಲಗಳು ತಿಳಿಸಿವೆ.

# ಸರ್ಕಾರಿ ಆಸ್ಪತ್ರೆಗೆ ಉಪ ವಿಭಾಗಾಧಿಕಾರಿಗಳ ಭೇಟಿ: ಸೌಲಭ್ಯಗಳ ಪರಿಶೀಲನೆ

• **ಉದಯವಾಹಿನಿ ಮುದ್ದೇಬಿಹಾಳ:**

ಪಟ್ಟಣದ ತಾಲ್ಲೂಕು ಸರ್ಕಾರಿ ಆಸ್ಪತ್ರೆಗೆ ಶುಕ್ರವಾರ ವಿಜಯಪುರ ಜಿಲ್ಲಾ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ ಅವರು ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಆಸ್ಪತ್ರೆಯ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿದ ಅವರು, ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಆರೋಗ್ಯ ವಿಚಾರಿಸಿದರು. ಆಸ್ಪತ್ರೆಯಲ್ಲಿ ಸಿಗುತ್ತಿರುವ ಸೌಲಭ್ಯಗಳು ಹಾಗೂ ಸಿಬ್ಬಂದಿಯ ನಡವಳಿಕೆ ಕುರಿತು ರೋಗಿಗಳಿಂದ ಮಾಹಿತಿ ಪಡೆದುಕೊಂಡರು. ತುರ್ತು ನಿಗಾ ಘಟಕ ಹೆರಿಗೆ ವಾರ್ಡ್, ಸ್ಕ್ಯಾನಿಂಗ್ ಎಕ್ಸ್ ರೇ ಯಂತ್ರಗಳ ಕಾರ್ಯನಿರ್ವಹಣೆಯನ್ನು ವೀಕ್ಷಿಸಿದರು.


ಉದಯವಾಹಿನಿ ಚಿತ್ರ

ಸರ್ಕಾರದಿಂದ ಉಚಿತವಾಗಿ ಪೂರೈಕೆಯಾಗುವ ಅಗತ್ಯ ಔಷಧಿಗಳು ಆಸ್ಪತ್ರೆಯ ಫಾರ್ಮಸಿಯಲ್ಲಿ ಲಭ್ಯವಿವೆಯೇ ಎಂಬುದನ್ನು ಖುದ್ದಾಗಿ ಪರಿಶೀಲಿಸಿದರು.

ಬಳಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ರಂಗನಾಥ ವೈದ್ಯ ಅವರೊಂದಿಗೆ ಸಮಾಲೋಚನೆ ನಡೆಸಿದ ಉಪ ವಿಭಾಗಾಧಿಕಾರಿಗಳು, ಆಸ್ಪತ್ರೆಯ ಆವರಣವನ್ನು ಸದಾ ಸ್ವಚ್ಛವಾಗಿಡುವಂತೆ ಸ್ಥಳದಲ್ಲಿದ್ದ ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ ಅವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಸ್ಥಳೀಯ ಮಾಧ್ಯಮ ಪ್ರತಿನಿಧಿಗಳು ಆಸ್ಪತ್ರೆಯಹಲವು ಪ್ರಮುಖ ಸಮಸ್ಯೆಗಳ ಕುರಿತು ಉಪ ವಿಭಾಗ ಅಧಿಕಾರಿಗಳ ಗಮನ ಸೆಳೆದರು. ಆಸ್ಪತ್ರೆಗೆ ಬರುವ ರೋಗಿಗಳ ಸಂಖ್ಯೆ ಹೆಚ್ಚಿರುವುದರಿಂದ ಹೆಚ್ಚುವರಿಯಾಗಿ ಎರಡು ಒಪಿಡಿ ಕೌಂಟರ್‌ಗಳ ಅವಶ್ಯಕತೆ ಇದೆ. ಆಸ್ಪತ್ರೆಯ ಪಕ್ಕದಲ್ಲಿರುವ ಹಳೆಯ ಕ್ವಾರ್ಟರ್ಸ್ ಜಾಗದಲ್ಲಿ ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿಗೆ ನೂತನ ವಸತಿಗೃಹಗಳನ್ನು ನಿರ್ಮಿಸಿಕೊಟ್ಟರೆ, ರೋಗಿಗಳಿಗೆ ತುರ್ತು ಸಮಯದಲ್ಲಿ ಸೂಕ್ತ ಚಿಕಿತ್ಸೆ ನೀಡಲು ಸಹಕಾರಿಯಾಗುತ್ತದೆ.

ಎಂ.ಎಲ್.ಸಿ ಪ್ರಕರಣಗಳ ದಾಖಲಾತಿ ಸುಲಭವಾಗಿಸಲು ಆಸ್ಪತ್ರೆಯಲ್ಲಿ ಪೊಲೀಸರನ್ನು ನಿಯೋಜಿಸಬೇಕು. ಅಲ್ಲದೆ, ಕೆಲವು ವ್ಯಸನಿ ಯುವಕರು ಆಸ್ಪತ್ರೆ ಸಿಬ್ಬಂದಿ ಹಾಗೂ ವೈದ್ಯರೊಂದಿಗೆ ಅನವಶ್ಯಕವಾಗಿ ದುರ್ವರ್ತನೆ ತೋರುತ್ತಿರುವುದರಿಂದ ಆಸ್ಪತ್ರೆಗೆ ಸೂಕ್ತ ಪೊಲೀಸ್ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು. ಮಾಧ್ಯಮಗಳ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಉಪ ವಿಭಾಗಾಧಿಕಾರಿಗಳು, ಈ ಸಮಸ್ಯೆಗಳ ಇತ್ಯರ್ಥಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

# ಅಲ್ಪಸಂಖ್ಯಾತರ ಹಕ್ಕುಗಳ ರಕ್ಷಣೆಗೆ ಆಯೋಗ ಬದ್ಧ

## ರಾಜ್ಯದಲ್ಲಿನ ಅಲ್ಪಸಂಖ್ಯಾತರ ಪೈಕಿ ಒಟ್ಟು ಮುಸ್ಲಿಮರಲ್ಲಿ ಶೇಕಡ 43.7 ರಷ್ಟು ಜನರು ಅನಕ್ಷರಸ್ಥರಾಗಿದ್ದಾರೆ

• **ಉದಯವಾಹಿನಿ, ಚಿತ್ರದುರ್ಗ-:**

ಸಂವಿಧಾನಬದ್ಧವಾಗಿ ದೇಶದ ಅಲ್ಪಸಂಖ್ಯಾತರಿಗೆ ದೊರೆತಿರುವ ಕಾನೂನಾತ್ಮಕ ಹಕ್ಕುಗಳು ಮತ್ತು ಸವಲತ್ತುಗಳನ್ನು ಸಮರ್ಪಕವಾಗಿ ತಲುಪಿಸಲು ಅವರ ಹಿತರಕ್ಷಣೆ ಮಾಡಲು ರಾಜ್ಯ ಅಲ್ಪಸಂಖ್ಯಾತರ ಆಯೋಗವು ಸಂಪೂರ್ಣ ಬದ್ಧವಾಗಿದೆ ಎಂದು ಆಯೋಗದ ಅಧ್ಯಕ್ಷ ಯು. ನಿಸಾರ್ ಅಹ್ಮದ್ ತಿಳಿಸಿದರು.

- **ಮೇಳ ಆಯೋಜಿಸಲು ಸೂಚನೆ**
- **ಬಾಲ್ಯ ವಿವಾಹ ತಡೆಗೆ ಕ್ರಮ**
- **ಅಂಗನವಾಡಿಗಳ ಆಧುನೀಕರಣ**

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಜುಲೈ 13 ರಂದು ರಾಜ್ಯ ಮಟ್ಟದ ಉನ್ನತ ಸಮಿತಿ ಸಭೆ ನಡೆಯಲಿದ್ದು, ಜಿಲ್ಲಾ ಮಟ್ಟದ ಪ್ರಗತಿ ವರದಿಗಳನ್ನು ಪರಿಶೀಲಿಸಲಾಗುವುದು. ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ವಹಿಸಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದ ಅವರು, ಪ್ರಗತಿಯ ವರದಿಯನ್ನು ನಿಯಮಿತವಾಗಿ ಸಲ್ಲಿಸಲು ಆದೇಶಿಸಿದರು.



**ಕುಟುಂಬಗಳ ಮಾಹಿತಿ ಕ್ರೂಢೀಕರಣಕ್ಕೆ ಸೂಚನೆ:** ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ಎಷ್ಟು ಕುಟುಂಬಗಳು ಇವೆ ಎಂಬ ನಿಖರವಾದ ಸಂಗ್ರಹಿಸಬೇಕು. ಕೇವಲ ಅಂಗನವಾಡಿಗೆ ಬರುವ ಮಕ್ಕಳನ್ನು ಮಾತ್ರ ಲೆಕ್ಕಕ್ಕೆ ತೆಗೆದುಕೊಳ್ಳುವುದಲ್ಲ, ಬದಲಿಗೆ ಸಮಗ್ರ ಕುಟುಂಬಗಳ ಸರ್ವೆ ನಡೆಸುವುದು ಮುಖ್ಯ ಎಂದು ಅವರು ಅಧಿಕಾರಿಗಳಿಗೆ ಅಧ್ಯಕ್ಷ ಯು. ನಿಸಾರ್ ಅಹ್ಮದ್ ನಿರ್ದೇಶನ ನೀಡಿದರು.

ಕುಟುಂಬಗಳ ಸರ್ವೆ ನಡೆಸಿದಾಗ ಮಾತ್ರ 3 ರಿಂದ 6 ವರ್ಷದೊಳಗಿನ ಎಷ್ಟು ಮಕ್ಕಳಿದ್ದಾರೆ ಎಂಬ ನಿಖರ ಮಾಹಿತಿ ಲಭ್ಯವಾಗುತ್ತದೆ. ಆ ಮೂಲಕ ಮಕ್ಕಳಿಗೆ ಅಗತ್ಯವಿರುವ ಪೌಷ್ಟಿಕಾಹಾರ ಹಾಗೂ ಸೌಲಭ್ಯಗಳನ್ನು ತಲುಪಿಸಲು ಸಾಧ್ಯವಾಗುತ್ತದೆ.

ರಾಜ್ಯದಲ್ಲಿನ ಅಲ್ಪಸಂಖ್ಯಾತರ ಪೈಕಿ ಒಟ್ಟು ಮುಸ್ಲಿಮರಲ್ಲಿ ಶೇಕಡ 43.7 ರಷ್ಟು ಜನರು ಅನಕ್ಷರಸ್ಥರಾಗಿದ್ದಾರೆ. ಅಕ್ಷರಸ್ಥರಾಗಿರುವ ಶೇಕಡ 56.3 ರಷ್ಟು ಜನರಲ್ಲಿ, ಎಸ್.ಎಸ್.ಎಲ್.ಸಿ ವರೆಗೆ ವಿದ್ಯಾಭ್ಯಾಸ ಪೂರೈಸಿದವರ ಪ್ರಮಾಣ ಶೇಕಡ 6.3 ರಷ್ಟಿದೆ. ಅಂಗನಾಡಿಯಿಂದ 6 ವರ್ಷ ಪೂರೈಸಿಸಿದ ಯಾವ ಶಾಲೆ ದಾಖಲಾಗಿದೆ ಮಾಹಿತಿ ದೊರೆಯತ್ತಿಲ್ಲ. ಶಾಲಾ ಶಿಕ್ಷಣ ಇಲಾಖೆಯಲ್ಲಿ ದಾಖಲಾದ ಮಕ್ಕಳ ಪೈಕಿ ಅಲ್ಪಸಂಖ್ಯಾತ ಮಕ್ಕಳ ವಿವರ ಖಂಖಿಖ ನಲ್ಲಿ ಲಭ್ಯವಾಗುತ್ತದೆ. ಶಾಲೆಗೆ ದಾಖಲಾದವರ ವಿವರ ದೊರೆಯವುದಿಲ್ಲ. ಈ ಹಿನ್ನಲೆಯಲ್ಲಿ ಕುಟುಂಬಗಳ ವಿವರ ಸಂಗ್ರಹಿಸುವುದು ಅಗತ್ಯವಾಗಿದೆ ಎಂದರು. ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಇಲಾಖೆಯ ವತಿಯಿಂದ ತಂಡಗಳನ್ನು ರಚಿಸಿ ಬಾಲ್ಯ ವಿವಾಹದ ವಿರುದ್ಧ ಜಾಗೃತಿ ಮೂಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ಒಟ್ಟು 2428 ಅಂಗನವಾಡಿಗಳಿದ್ದು, ಅದರಲ್ಲಿ 107 ಅಲ್ಪಸಂಖ್ಯಾತರ ಅಂಗನವಾಡಿಗಳಿವೆ. ಸರ್ಕಾರದ ಆದೇಶದಂತೆ 200 ಅಂಗನವಾಡಿಗಳನ್ನು ಎಲ್‌ಕೆಜಿ ಹಾಗೂ ಯುಕೆಜಿ ತರಗತಿಗಳನ್ನು ಆರಂಭಿಸಲು ಮೇಲ್ದರ್ಜೆಗೆ ಏರಿಸಲಾಗಿದೆ. ಇದರಲ್ಲಿ 7 ಅಲ್ಪಸಂಖ್ಯಾತ ಅಂಗನವಾಡಿಗಳೂ ಸೇರಿವೆ. ಉತ್ತಮ ಕಟ್ಟಡ ಹಾಗೂ ಹೆಚ್ಚಿನ ಮಕ್ಕಳಿರುವ ಕಡೆ ಈ ಸೌಲಭ್ಯ ಕಲ್ಪಿಸಲಾಗಿದ್ದು, ಇಲಾಖೆಯಿಂದ ಅಗತ್ಯ ಪುಸ್ತಕಗಳನ್ನು ವಿತರಿಸಲಾಗಿದೆ. ಬಿಎಡ್, ಎಂಎ ಹಾಗೂ ಪದವಿ ಮುಗಿಸಿದ ಅರ್ಹ ಅಂಗನವಾಡಿ ಕಾರ್ಯಕರ್ತೆಯರಿಗೆ ಎನ್‌ಜಿಒ ಮತ್ತು ಜಿಲ್ಲಾ ಪಂಚಾಯತ್ ಸಿಇಒ ಮೂಲಕ ವಿಶೇಷ ತರಬೇತಿ ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ವಿಜಯಕುಮಾರ್ ಮಾಹಿತಿ ನೀಡಿದರು.



> ವಸತಿ ಯೋಜನೆ ಅಡಿ ಗ್ರಾಮಗಳಲ್ಲಿ ಅರ್ಹ ಅಲ್ಪಸಂಖ್ಯಾತ ಫಲಾನುಭವಿಗಳು ಲಭ್ಯವಿಲ್ಲದಿದ್ದರೆ, ಯೋಜನೆಯನ್ನು ಮಾರ್ಪಡಿಸಿ ತಾಲ್ಲೂಕಿನ ಬೇರೆ ಭಾಗದ ಫಲಾನುಭವಿಗೆ ನೀಡಬೇಕು. ಬ್ಯಾಂಕುಗಳು ವಿನಾಕಾರಣ ಶಿಕ್ಷಣ, ಉದ್ಯೋಗ ಸಾಲದ ಅರ್ಜಿಗಳನ್ನು ತಿರಸ್ಕರಿಸಬಾರದು ಎಂದು ಹೇಳಿದರು.
> – ಅಧ್ಯಕ್ಷ ಯು.ನಿಸಾರ್ ಅಹ್ಮದ್

**ಯೋಜನೆಗಳ ಕುರಿತು ಮೇಳ ಆಯೋಜಿಸಿ**

ಅಲ್ಪಸಂಖ್ಯಾತರು ಹೆಚ್ಚಿರುವ ಕಡೆ ಕಾರ್ಮಿಕ, ಕೌಶಲ ಅಭಿವೃದ್ಧಿ, ವಿಕಲಚೇತನರ ಕಲ್ಯಾಣ, ಉದ್ಯೋಗ ವಿನಿಮಯ ಕಚೇರಿ ಸೇರಿದಂತೆ ಹಲವಾರು ಇಲಾಖೆ ಸರ್ಕಾರಿ ಯೋಜನೆಗಳ ಕುರಿತು ಮೇಳ ಆಯೋಜಿಸಿ ಮಾಹಿತಿ ನೀಡಬೇಕು. ಮಾರುಕಟ್ಟೆ ಬೇಡಿಕೆಗೆ ಅನುಗುಣವಾಗಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಯೋಜನೆ ರೂಪಿಸಬೇಕು.

> ಕಳೆದ ವರ್ಷ ಎನ್.ಡಿ.ಪಿ.ಎಸ್ ಕಾಯ್ದೆಯಡಿ 95 ಪ್ರಕರಣಗಳನ್ನು ದಾಖಲಿಸಲಾಗಿತ್ತು. ಪ್ರಸಕ್ತ ವರ್ಷದಲ್ಲಿ 97 ಪ್ರಕರಣಗಳನ್ನು ದಾಖಲಿಸಲಾಗಿದ್ದು ಮಾದಕ ವಸ್ತುಗಳ ತಡೆಗೆ ತೀವ್ರ ಕಾರ್ಯಚಾರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.
> –ಪೋಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್

# ಡಾ.ಬಾಬು ಜಗಜೀವನರಾಮ್ ನಾಮಫಲಕಕ್ಕೆ ಅವಮಾನ ಖಂಡಿಸಿ ಬೃಹತ್ ಪ್ರತಿಭಟನೆ

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಕೋಟಗಾ ಗ್ರಾಮದಲ್ಲಿ ಭಾರತ ದೇಶದ ಮಾಜಿ ಉಪಪ್ರಧಾನಿ ಹಸಿರು ಕ್ರಾಂತಿ ಹರಿಕಾರರು ಡಾ.ಬಾಬು ಜಗಜೀವನರಾಮ್ ಅವರ ನಾಮಫಲಕ್ಕೆ ಸಗಣಿ ಎರಚಿ ಅವಮಾನ ಮಾಡಿದ ಕಿಡಿಗೇಡಿಗಳನ್ನು ಶೀಘ್ರದಲ್ಲೇ ಬಂಧಿಸಿ ಕಠಿಣ ಶಿಕ್ಷೆ ವಿಧಿಸುವಂತೆ ಒತ್ತಾಯಿಸಿ ಮಾದಿಗಾ ಮಹಾಸಭಾ ವತಿಯಿಂದ ಚಂದನಕೇರಾದ ಮುಖ್ಯರಸ್ತೆಯಲ್ಲಿ ಬೃಹತ್ ಪ್ರತಿಭಟನೆ ಮಾಡಿ ಡಿವೈಎಸ್ಪಿ ಸಂಗಮನಾಥ ಹಿರೇಮಠ ಮತ್ತು ಕಂದಾಯ ನಿರೀಕ್ಷಕ ರವಿ ಪಾಟೀಲ ಅವರಿಗೆ ಮನವಿಪತ್ರ ಸಲ್ಲಿಸಿದರು.

ಮಾದಿಗಾ ಮಹಾಸಭಾ ಜಿಲ್ಲಾಧ್ಯಕ್ಷ ಗೋಪಾಲರಾವ ಕಟ್ಟಿಮನಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಮಾತನಾಡಿದ ಇವರು,ಡಾ.ಬಾಬು ಜಗಜೀವನರಾಮ್ ನಾಮಫಲಕದ ಭಾವಚಿತ್ರಕ್ಕೆ ಸಗಣಿ ಎರಚಿ ಮೆಟ್ಟು ಹಾಕಿ ಅವಮಾನ ಮಾಡಿದ್ದು ಈಡಿ ದೇಶದ ನಮ್ಮ ಮಾದಿಗ ಸಮಾಜಕ್ಕೆ ಅವಮಾನ ಮಾಡಿದ್ದಾರೆ ಹಾಗಾಗಿ ಈ ಕೃತ್ಯ ಎಸೇದ ಕಿಡಿಗೇಡಿಗಳನ್ನು ಶೀಘ್ರದಲ್ಲೇ ಪತ್ತೆಹಚ್ಚಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಿ ಕಠಿಣ ಶಿಕ್ಷೆ ವಿಧಿಸಬೇಕು.ಮಾದಿಗ ಸಮಾಜ ಶಾಂತಿಪ್ರೀಯ ಸಮಾಜವಾಗಿದೆ ಆದರೆ ಇಂಥಹ ಘಟನೆಗಳು ಜರುಗುತ್ತಿದರೆ ನಮ್ಮ ಮಾದಿಗ ಸಮಾಜ ಸಹಿಸಿಕೊಳ್ಳಲು ಆಗುವುದಿಲ್ಲ ಆರೋಪಿಗಳು ಎಷ್ಟೆ ಬಲಿಷ್ಠ ಇರಲಿ ಅಂಥಹ ಆರೋಪಿಗಳಿಗೆ ಪೋಲೀಸರು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಮತ್ತು ಕೋಟಗಾದಲ್ಲಿ ಡಾ.ಬಾಬು ಜಗಜೀವನರಾಂಗೆ ನಾಮಫಲಕಕ್ಕೆ ಅವಮಾನ ಮಾಡಿದ ಸ್ಥಳದಲ್ಲೇ ಸರ್ಕಾರದಿಂದ ಮೂರ್ತಿ ಸ್ಥಾಪಿಸಬೇಕು,ರಾಜ್ಯದಲ್ಲಿ ಅನೇಕ ಕಡೆ ಈ ರೀತಿಯ ಘಟನೆಗಳು ಜರುಗುತ್ತಿದೆ ಸರ್ಕಾರಗಳು ಮುತುವರ್ಜಿ ವಹಿಸಿ ಮುಂದೆ ಇಂಥಹ ಘಟನೆಗಳು ಜರುಗದಂತೆ ನೋಡಿಕೊಳ್ಳಬೇಕು ಮತ್ತು ರಾಜ್ಯದಲ್ಲಿ ಇರುವ ಎಲ್ಲಾ ಮಹಾಪುರುಷರ ನಾಮಫಲಕಗಳ ಎದುರು ಮತ್ತು ಮೂರ್ತಿಗಳು ಎದುರು ಸಿಸಿಟಿವಿ ಕ್ಯಾಮೆರಾ ಅಳವಡಿಸಬೇಕು ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

ಮಾದಿಗ ದಂಡೋರ ಸಮಾಜದ ಅಧ್ಯಕ್ಷ ಮಲ್ಲು ಕೋಡಂಬಲ್ ನರಸಪ್ಪಾ ಕೀವಣೋರಕರ್,ಪ್ರಮೋಧ,ದಶರಥ,ಸೋಮಶೇಖರ ಶೇಳಗಿ,ಮಲ್ಲಿಕಾರ್ಜುನ,ಮೋಹನ ಐನಾಪೂರ,ಮಂಜುನಾಥ ಕೋಟಗಾ,ಅವಿರೋಧ ಚಂದನಕೇರಾ,ಆಕಾಶ ಬ್ಯಾನರ್ಜಿ,ಸೇರಿದಂತೆ ನೂರಾರು ಸಮಾಜದ ಮುಖಂಡರು ಮಹಿಳೆಯರು ಇದ್ದರು.

# ಮಳೆಗಾಗಿ ಮುಧೋಳ ಗ್ರಾಮದಲ್ಲಿ ವಿಶೇಷ 'ಗುರ್ಜಿ-ಗುರ್ಜಿ' ಆಚರಣೆ

• **ಉದಯವಾಹಿನಿ, ಯಲಬುರ್ಗಾ:**

ಮುಂಗಾರು ಆರಂಭವಾಗಿ ಒಂದು ತಿಂಗಳು ಕಳೆದರೂ ಸಮರ್ಪಕ ಮಳೆಯಾಗದ ಕಾರಣ ರೈತರು ಆತಂಕಕ್ಕೆ ಒಳಗಾಗಿದ್ದಾರೆ.

ತಾಲ್ಲೂಕಿನ ಮುಧೋಳ ಗ್ರಾಮದಲ್ಲಿ ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆ ರೈತರು ಹಾಗೂ ರೈತಾಪಿ ವರ್ಗದ ಮಹಿಳೆಯರು ಪುಟಾಣಿ ಮಕ್ಕಳು ಪ್ರಾಚೀನ ಜನಪದ ಸಂಪ್ರದಾಯವಾದ 'ಗುರ್ಜಿ-ಗುರ್ಜಿ' ಆಚರಣೆ ನಡೆಸಿ, ಮಳೆಗಾಗಿ ವರುಣ ದೇವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಗ್ರಾಮದ ಮಹಿಳೆಯರು ಮತ್ತು ಮಕ್ಕಳು ಸಂಪ್ರದಾಯಬದ್ಧ ಗುರ್ಜಿ-ಗುರ್ಜಿ ಆಚರಣೆ ನಡೆಸಿದರು. ಮಂಜುನಾಥ್ ಬೆಟಗೇರಿ ಗುರ್ಜಿ ವೇಷ ಧರಿಸಿ ಗ್ರಾಮದಲ್ಲಿ ಮನೆ ಮನೆಗೆ ತೆರಳಿ ಗುರ್ಜಿಗೆ ಸಂಬಂಧಿಸಿದ ಜನಪದ ಗೀತೆಗಳನ್ನು ಹಾಡುತ್ತಾ ವರುಣ ದೇವನನ್ನು ಕೋರಿದರು.

ಬಳಿಕ ಮನೆಗಳಿಂದ ಕಾಳು, ಕಡಿ ಸೇರಿದಂತೆ ವಿವಿಧ ಧಾನ್ಯಗಳನ್ನು ಸಂಗ್ರಹಿಸಿ ದೇವಸ್ಥಾನಕ್ಕೆ ಅರ್ಪಿಸಲಾಯಿತು. ಗೋಮಾತೆಯ ಸಗಣಿಯಿಂದ ನೆಲದ ಮೇಲೆ ದೇವತೆಯ ಚಿತ್ರ ಬಿಡಿಸಿ, ಅದರ ಮೇಲೆ ಹುಲ್ಲು ಇಟ್ಟು ಸಂಪ್ರದಾಯಬದ್ಧವಾಗಿ ಗುರ್ಜಿ ಪೂಜೆ ನೆರವೇರಿಸಲಾಯಿತು.

**ಮಳೆಗಾಗಿ ವರುಣ ದೇವರಿಗೆ ವಿಶೇಷ ಪ್ರಾರ್ಥನೆ**

ಮೂರು ದಿನಗಳ ಗುರ್ಜಿ ವೇಷ ನಡೆಸಲಾಗುತ್ತದೆ. ವಿಶೇಷ ಪೂಜೆ ಸಲ್ಲಿಸಿ, ಉತ್ತಮ ಮಳೆಯಾಗಿ ರೈತರ ಬದುಕು ಸಮೃದ್ಧಿಯಾಗಲೆಂದು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಪ್ರಸಾದ ವಿತರಿಸಲಾಯಿತು.


ಉದಯವಾಹಿನಿ ಚಿತ್ರ

ಇದೆ ಸಂದರ್ಭದಲ್ಲಿ ಈರಮ್ಮ ವಿವೇಕಿ. ದಾವಲಾಬಿ ಮುಳಗುಂದ. ಮಹಾದೇವಿ ತಳವಾರ. ಮಾಜಿ ಗ್ರಾಪಂ ಸದಸ್ಯ ಯಲ್ಲಮ್ಮ ಮಾಸ್ತಿ. ಹಾಲು ಉತ್ಪಾದಕರ ಸಂಘದ ಉಪಾಧ್ಯಕ್ಷರು ರೇಣುಕಾ ಗುಡಗೇರಿ. ಹುಸೇನಬಿ ಮಂಗಳೂರು. ಜೂಲೇಕಬಿ ಹಿರೇಮನಿ. ಲಕ್ಷವ್ವ ತಳವಾರ. ಬಸಮ್ಮ ಸಲಬಗೌಡರ್. ರಮಜಾನಬಿ ಚಳಗೇರಿ. ಕರಿಸಿದ್ದಪ್ಪ ವಿವೇಕಿ. ಪುಟಾಣಿ ಮಕ್ಕಳು ಇತರರು ಇದ್ದರು.

# ಬರಗಾಲ ಕಾಮಗಾರಿ ಆರಂಭಿಸಲು ಕೂಲಿಕಾರ್ಮಿಕರ ಒತ್ತಾಯ

• **ಉದಯವಾಹಿನಿ, ವಾಡಿ:**

ಜಿಲ್ಲೆಯಲ್ಲಿ ಭೀಕರ ಬರಗಾಲ ಆವರಿಸುವ ಮುನ್ಸೂಚನೆ ಬಂದಿದ್ದು ಸ್ಥಳೀಯ ಗ್ರಾ.ಪಂ ಅಧಿಕಾರಿಗಳು ಕೂಡಲೇ ನರೇಗಾ ಕಾಮಗಾರಿ ವಿಸ್ತರಿಸುವಂತೆ ಮತ್ತು ಕಾಮಗಾರಿಗಳಲ್ಲಿ ಅವ್ಯವಹಾರ ತಡೆಗೆ ಸೂಕ್ತ ಕ್ರಮ ಜರುಗಿಸುವಂತೆ ಕೂಲಿಕಾರ್ಮಿಕರು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

ಇಂಗಳಗಿ ಗ್ರಾ.ಪಂ ಕಚೇರಿ ಮುಂದೆ ಈಚೆಗೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದ ಕರ್ನಾಟಕ ಪ್ರಾಂತ ಕೂಲಿಕಾರರ ಸಂಘದ ಕಾರ್ಯಕರ್ತರು, ಬರಗಾಲ ಕಾಮಗಾರಿ ಹಾಗೂ ನರೇಗಾದಲ್ಲಿನ ಭ್ರಷ್ಟಾಚಾರ ತಡೆಯುವಂತೆ ಪಿಡಿಒ ಮೂಲಕ ತಾ.ಪಂ ಇಒ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಪಿಡಿಒ ಕಲ್ಯಾಣಕುಮಾರ ಮನವಿ ಪತ್ರ ಸ್ವೀಕರಿಸಿದರು. ಪ್ರಾಂತ ಕೃಷಿ ಕೂಲಿಕಾರರ ಸಂಘದ ಇಂಗಳಗಿ ಗ್ರಾಮ ಘಟಕದ ಅಧ್ಯಕ್ಷ ರತನ್ ಸಂಕನಕರ, ಕಾರ್ಯದರ್ಶಿ ಭೀಮಬಾಯಿ ಚೆನ್ನಗುಂಡ, ರತ್ನಮ್ಮ ಪೂಜಾರಿ, ಶೋಭಾ ನಾಟೀಕಾರ, ಬಸಮ್ಮ ನಾಟೀಕಾರ, ಲಲಿತಾ ಚನ್ನಗುಂಡ, ಶೋಭಾ ಹಿಂದಿನಕೇರಿ, ಸೌಂದರ್ಯ ಸಂಕನಕರ, ಭುವನೇಶ್ವರಿ, ಫಾತಿಮಾ, ಬಸಪ್ಪ ಕೊಳ್ಳಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಅರಣ್ಯ ಇಲಾಖೆಗೆ ಹಸ್ತಕ್ಷೇಪ ಮಾಡಲು ಅಧಿಕಾರವಿಲ್ಲ ಎಂದ ರವೀಂದ್ರ ನಾಯ್ಕ

• **ಉದಯವಾಹಿನಿ, ಶಿರಸಿ:**

'ಅಡಿಕೆ ಭಾಗಾಯತಿಗೆ ಬಿಟ್ಟಿರುವ ಬೆಟ್ಟ ಕ್ಷೇತ್ರದಲ್ಲಿ ಸಾಗುವಳಿದಾರರ ಮತ್ತು ವಾಸ್ತವ್ಯಕ್ಕೆ ಮಾಡಿಕೊಂಡ ಅತಿಕ್ರಮಣದಾರರ ಚಟುವಟಿಕೆಗೆ ಹಸ್ತಕ್ಷೇಪ ಮಾಡಲು ಮತ್ತು ನಿಯಂತ್ರಿಸುವ ಯಾವುದೇ ಅಧಿಕಾರ ಅರಣ್ಯ ಇಲಾಖೆಗೆ ಇಲ್ಲ' ಎಂದು ಅರಣ್ಯ ಭೂಮಿ ಹಕ್ಕು ಹೋರಾಟಗಾರರ ವೇದಿಕೆ ಅಧ್ಯಕ್ಷ ರವೀಂದ್ರ ನಾಯ್ಕ ಅವರು ಹೇಳಿದರು. ಇಲ್ಲಿನ ರಾಜೀವನಗರದಲ್ಲಿ ಈಚೆಗೆ ಹಮ್ಮಿಕೊಂಡಿದ್ದ ಬೆಟ್ಟ ಅತಿಕ್ರಮಣದಾರರ ಸಭೆಯಲ್ಲಿ ಅವರು ಮಾತನಾಡಿದರು. 'ಬ್ರಿಟಿಷರು ಸರ್ವೆ ಸೆಟಲ್‌ಮೆಂಟ್ ಮಾಡುವಾಗಲೇ ಬೆಟ್ಟವನ್ನು ಕಂದಾಯ ಇಲಾಖೆಗೆ ಸೇರಿಸಿ, ಮೀಸಲು ಅರಣ್ಯದಿಂದ ಮುಕ್ತಗೊಳಿಸಿದ್ದಾರೆ. ಕಂದಾಯ ಮಾಲೀಕತ್ವದ ಬೆಟ್ಟ ಕ್ಷೇತ್ರದಲ್ಲಿ ಅರಣ್ಯ ಕಾಯ್ದೆ ಅಡಿಯಲ್ಲಿ ಕೇವಲ ಮರಗಳ ರಕ್ಷಣೆ ಮತ್ತು ಪಾಲನೆಗೆ ಮಾತ್ರ ಅರಣ್ಯ ಇಲಾಖೆಗೆ ಅವಕಾಶವಿದೆ. ಬೆಟ್ಟ ಕ್ಷೇತ್ರದ ಭೂಮಿಯ ಮೇಲಿನ ಹಕ್ಕಿಗೆ ಸಂಬಂಧಿಸಿದಂತೆ ಬೆಟ್ಟದಾರರನ್ನಾಗಲಿ


ಉದಯವಾಹಿನಿ ಚಿತ್ರ

ಅಥವಾ ಅತಿಕ್ರಮಣದಾರರನ್ನಾಗಲಿ ಪ್ರಶ್ನಿಸಲು ಅರಣ್ಯ ಇಲಾಖೆಗೆ ಕಾನೂನಾತ್ಮಕ ಅಧಿಕಾರವಿಲ್ಲ. ಹೀಗಿದ್ದರೂ ಇಲಾಖೆಯು ವಿನಾಕಾರಣ ಗೊಂದಲ ಸೃಷ್ಟಿಸುತ್ತಿರುವುದು ಖೇದಕರ. ಬೆಟ್ಟ ಕ್ಷೇತ್ರದಲ್ಲಿ ಕಾನೂನು ವ್ಯಾಪ್ತಿ ಮೀರಿದ ಅರಣ್ಯ ಇಲಾಖೆಯ ಹಸ್ತಕ್ಷೇಪ ನಿಯಂತ್ರಿಸುವುದು ಅವಶ್ಯವಾಗಿದೆ' ಎಂದು ಒತ್ತಾಯಿಸಿದರು.

'ಬೆಟ್ಟವು ಭಾಗಾಯಿತದ ಅವಿಭಾಜ್ಯ ಅಂಗವಾಗಿದೆ. ಇಲ್ಲಿ ಭಾಗಾಯಿತದಾರರಷ್ಟೇ ಅಲ್ಲದೆ ಭೂ ರಹಿತ ಹಾಗೂ ವಸತಿ ರಹಿತರೂ ಮನೆ ಕಟ್ಟಿಕೊಂಡು ವಾಸ್ತವ್ಯಕ್ಕೆ ಆಸರೆ ಕಂಡುಕೊಂಡಿದ್ದಾರೆ. ಬೆಟ್ಟ ಭೂಮಿಯನ್ನು ಅನುಭವಿಸುವ ಸುಮಾರು 18 ಸಾವಿರ ಭಾಗಾಯಿತದಾರರಿದ್ದರೆ, ಬೆಟ್ಟದ ಕ್ಷೇತ್ರದಲ್ಲಿ ವಾಸ್ತವ್ಯಕ್ಕಾಗಿ ಆಶ್ರಯ ಪಡೆದಿರುವ 7 ರಿಂದ 8 ಸಾವಿರಕ್ಕೂ ಹೆಚ್ಚು ಕುಟುಂಬಗಳು ಅರಣ್ಯ ಇಲಾಖೆಯ ದ್ವಂದ್ವ ನೀತಿಯಿಂದಾಗಿ ಆತಂಕ ಎದುರಿಸುತ್ತಿವೆ. ಈ ನಿಟ್ಟಿನಲ್ಲಿ ಅರಣ್ಯ ಇಲಾಖೆಯು ತನ್ನ ಕ್ರಮಗಳ ಕುರಿತು ತಕ್ಷಣ ಸ್ಪಷ್ಟನೆ ನೀಡಬೇಕು' ಎಂದು ಆಗ್ರಹಿಸಿದರು. 'ಹೊಸದಾಗಿ ಯಾವುದೇ ಅತಿಕ್ರಮಣಕ್ಕೆ ಅವಕಾಶ ನೀಡಬಾರದು. ಆದರೆ, ಈಗಾಗಲೇ ಸಾಗುವಳಿ ಮತ್ತು ವಾಸ್ತವ್ಯ ಮಾಡುತ್ತಿರುವ ಅತಿಕ್ರಮಣದಾರರ ಕಾನೂನುಬದ್ಧ ಭೂಮಿ ಹಕ್ಕಿನ ಕುರಿತು ಸರ್ಕಾರ ಶಾಶ್ವತ ಪರಿಹಾರ ರೂಪಿಸಬೇಕು' ಎಂದ ಅವರು, 'ಇತ್ತೀಚೆಗೆ ಉದ್ಭವಿಸಿರುವ ಗೊಂದಲಗಳ ಕುರಿತು ಕಾನೂನಾತ್ಮಕವಾಗಿ ಚರ್ಚಿಸಲು ಅರಣ್ಯ ಇಲಾಖೆಗೆ ಪತ್ರ ಬರೆಯಲಾಗುವುದು' ಎಂದು ತಿಳಿಸಿದರು. ನಗರಸಭೆ ಮಾಜಿ ಅಧ್ಯಕ್ಷ ಪ್ರದೀಪ ಶೆಟ್ಟಿ, ಪ್ರಮುಖರಾದ ಕಿರಣ ನಾಯ್ಕ, ರಘು ಕಾನಡೆ, ಜಬ್ಬಾರ ಶೇಖ್, ಮಗದಲೀನ್ ಲೋಪೀಸ್, ಮಂಜುಳಾ ಅನಾಬಳಗ, ಚಂದ್ರು ನಾಯ್ಕ, ಬಾಬು ಅನದಳಗಿ, ಉಮೇಶ ಪಟಗಾರ ಇದ್ದರು.

# ಚಲಿಸುತ್ತಿದ್ದ ರೈಲಿನಲ್ಲಿದ್ದ ಮಹಿಳೆಗೆ ಯಶಸ್ವಿ ಹೆರಿಗೆ!

## ಇಂತಹ ಅತ್ಯಂತ ಕಠಿಣ ಹಾಗೂ ತುರ್ತು ಪರಿಸ್ಥಿತಿಯಲ್ಲೂ ಧೃತಿಗೆಡದ ವೈದ್ಯರು

• **ಉದಯವಾಹಿನಿ, ಹಾಸನ:**

ವಾರಣಾಸಿಗೆ ತೆರಳುತ್ತಿದ್ದ ರೈಲಿನಲ್ಲಿ ಹೆರಿಗೆ ನೋವು ಕಾಣಿಸಿಕೊಂಡ ಗರ್ಭಿಣಿ ಮಹಿಳೆಗೆ, ಹಾಸನದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಕಾಲೇಜಿನ ಮೂವರು ಸ್ನಾತಕೋತ್ತರ ವೈದ್ಯ ವಿದ್ಯಾರ್ಥಿನಿಯರು ಸುರಕ್ಷಿತವಾಗಿ ಹೆರಿಗೆ ಮಾಡಿಸಿ, ತಾಯಿ - ಮಗುವಿನ ಪ್ರಾಣ ಉಳಿಸಿದ ಅಪರೂಪದ ಘಟನೆ ಜುಲೈ 7ರಂದು ವಾರಣಾಸಿ ಸಮೀಪ ನಡೆದಿದೆ.

**1 : ತೀವ್ರ ಹೆರಿಗೆ ನೋವು**
**2 ಜೀವಕ್ಕೆ ತೀವ್ರ ಆತಂಕ**
**3 : ಮಗುವಿನ ಹೊಕ್ಕುಳ ಬಳ್ಳಿ**

ಹಾಸನ ನಗರದ ತಣ್ಣೀರುಹಳ್ಳದಲ್ಲಿರುವ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಕಾಲೇಜು ಆಸ್ಪತ್ರೆಯ ಮಾನಸರೋಗ ವಿಭಾಗದ ಸ್ನಾತಕೋತ್ತರ ವೈದ್ಯ ವಿದ್ಯಾರ್ಥಿನಿಯರುಗಳಾದ ಡಾ. ರಶ್ಮಿ ಬೀಳಗಿ, ಡಾ. ಲತಾಶ್ರೀ ಎನ್. ಹಾಗೂ ಡಾ. ಶಾಹಿನ್ ಎಂ. ಅವರೇ ಈ ಮಾನವೀಯತೆ ಮೆರೆದ ಕಲಿಯುಗದ ದೇವತೆಗಳು ಅಂದರೇ ತಪ್ಪಾಗದು.

ಮಾತನಾಡಿದ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆಯ ಮಾನಸರೋಗ ವಿಭಾಗದ ಪ್ರಾಧ್ಯಾಪಕಿ ಡಾ. ಸವಿತಾ, ರಾಷ್ಟ್ರೀಯ ಸಮ್ಮೇಳನವೊಂದರಲ್ಲಿ ಭಾಗವಹಿಸಲು ಹಾಸನದ ಈ ಮೂವರು ವೈದ್ಯರು ವಾರಣಾಸಿಗೆ ರೈಲಿನಲ್ಲಿ ಪ್ರಯಾಣಿಸುತ್ತಿದ್ದರು. ಇದೇ ವೇಳೆ, ಅದೇ ರೈಲಿನಲ್ಲಿದ್ದ ಗರ್ಭಿಣಿ ಮಹಿಳೆಯೊಬ್ಬರಿಗೆ ತೀವ್ರ ಹೆರಿಗೆ ನೋವು ಕಾಣಿಸಿಕೊಂಡಿದೆ. ಹತ್ತಿರದಲ್ಲಿ ಯಾವುದೇ ಆಸ್ಪತ್ರೆ ಇಲ್ಲದ ಕಾರಣ ಹಾಗೂ ಸಮಯದ ಅಭಾವದಿಂದಾಗಿ ಮಹಿಳೆ ಮತ್ತು ಮಗುವಿನ ಜೀವಕ್ಕೆ ತೀವ್ರ ಆತಂಕ ಎದುರಾಗಿತ್ತು. ಪರಿಸ್ಥಿತಿಯ ಗಂಭೀರತೆಯನ್ನು ಅರಿತು ತಕ್ಷಣ ಕಾರ್ಯಪ್ರವೃತ್ತರಾದ ಮೂವರು ವೈದ್ಯೆಯರು ಗರ್ಭಿಣಿಯ ತಪಾಸಣೆ ನಡೆಸಿದ್ದಾರೆ. ಈ ವೇಳೆ ಮಗುವಿನ ಹೊಕ್ಕುಳ ಬಳ್ಳಿ ಸುತ್ತಿಕೊಂಡಿರುವುದು ಪತ್ತೆಯಾಗಿದೆ. ರೈಲಿನಲ್ಲಿ ಸೌಲಭ್ಯಗಳ ಕೊರತೆಯಿದ್ದರೂ ತಮ್ಮ ವೃತ್ತಿಪರತೆ ಹಾಗೂ ಸಮಯಪ್ರಜ್ಞೆಯಿಂದ ಇಂತಹ ಅತ್ಯಂತ ಕಠಿಣ ಹಾಗೂ ತುರ್ತು ಪರಿಸ್ಥಿತಿಯಲ್ಲೂ ಧೃತಿಗೆಡದ ವೈದ್ಯರು, ತಕ್ಷಣವೇ ಜಾಗರೂಕತೆಯಿಂದ ಬಳ್ಳಿಯನ್ನು ಬಿಡಿಸಿ, ತಾಯಿ-ಮಗುವಿನ ಪ್ರಾಣ ಉಳಿಸಿದ್ದಾರೆ.



ಉದಯವಾಹಿನಿ ಚಿತ್ರ

> ಈ ಮೂವರು ಮಹಿಳಾ ವೈದ್ಯರ ಸಾಹಸಕ್ಕೆ ಹಾಗೂ ಮಾನವೀಯ ಕಾರ್ಯಕ್ಕೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಪ್ರಶಂಸೆ ಮತ್ತು ಅಪಾರ ಮೆಚ್ಚುಗೆ ವ್ಯಕ್ತವಾಗುತ್ತಿದ್ದು, ಸುರಕ್ಷಿತವಾಗಿ ಹೆರಿಗೆ ಮಾಡಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ತಿಳಿಸಿದರು.
> –ಪ್ರಾಧ್ಯಾಪಕಿ ಡಾ. ಸವಿತಾ

> ತಕ್ಷಣ ರೈಲ್ವೆ ಇಲಾಖೆ ಸಿಬ್ಬಂದಿಗಳು ರೈಲಿನಲ್ಲಿದ್ದ ವೈದ್ಯರ ಸಹಾಯದ ಮೂಲಕ ನನಗೆ ಹೆರಿಗೆ ಮಾಡಿಸಿದ್ದಾರೆ. ನಾನು ಮತ್ತು ನನ್ನ ಮಗು ಇಬ್ಬರೂ ಆರೋಗ್ಯವಾಗಿದ್ದೇವೆ ಎನ್ನುತ್ತಾರೆ ಮಗುವಿಗೆ ಜನ್ಮ ನೀಡಿದ ಮಹಿಳೆ
> –ಅಬಿತ ದೇವಿ.

**ತಾಯಿ ಮತ್ತು ನವಜಾತ ಶಿಶು ಇಬ್ಬರೂ ಸುರಕ್ಷಿತ:** ನಮ್ಮ ಕಾಲೇಜಿನಲ್ಲಿ ಒಟ್ಟು ಮೂರು ಮಾನವೀಯ ಪ್ರಕರಣ ಜರುಗಿದ್ದು, ನಮ್ಮ ಕಾಲೇಜಿಗೆ ವಿದ್ಯಾರ್ಥಿಗಳು ಚಿನ್ನದ ಪದಕವನ್ನು ತಂದುಕೊಟ್ಟಷ್ಟು ಸಂತೋಷವಾಗಿದೆ.

ಈ ಹಿಂದೆ ನಮ್ಮ ಕಾಲೇಜಿನ ಹಳೇ ವಿದ್ಯಾರ್ಥಿಗಳು ಜು.4ರಂದು ಟ್ರಾಫಿಕ್‌ನಲ್ಲಿ ಸಿಲುಕಿಕೊಂಡಿದ್ದ ಗರ್ಭಿಣಿ ಸ್ತ್ರೀ ಒಬ್ಬರಿಗೆ ಕಾರಿನಲ್ಲಿಯೇ ಹೆರಿಗೆ ಮಾಡಿಸುವ ಮೂಲಕ ಒಂದು ಮಾನವೀಯ ಹಾಗೂ ಸಮಾಜಮುಖಿ ಕಾರ್ಯಕ್ಕೆ ಮೊದಲ ಬಾರಿಗೆ ಮುನ್ನುಡಿ ಬರೆದಿದ್ದರು.

**ಸುಲಲಿತವಾಗಿ ಹೆರಿಗೆ**

ತಕ್ಷಣ ನಾವು ರೈಲ್ವೆ ಸಿಬ್ಬಂದಿಗಳಿಗೆ ವಿಷಯ ತಿಳಿಸಿದ್ದು ಸಾಧ್ಯವಾದಷ್ಟು ನಮಗೆ ಬೇಕಾದ ಪರಿಕರಗಳನ್ನು ನೀಡಿದರು. ನಂತರ ಕಾಲೇಜಿನಲ್ಲಿ ಕ್ಲಾಸ್ ಕೇಳಿದ್ದ ಕೆಲವು ಅಂಶಗಳ ಆಧಾರದ ಮೇಲೆ, ಮಗುವನ್ನು ಹೇಗೆ ಹೆರಿಗೆ ಮಾಡಿಸಬೇಕು ಎಂಬುದನ್ನು ನನ್ನ ಸಹೋದ್ಯೋಗಿ, ಡಾ. ಲತಾಶ್ರೀ ಎನ್. ಮಾರ್ಗದರ್ಶನದಲ್ಲಿ ಪಡೆದು ನಾವು ಸುಲಲಿತವಾಗಿ ಹೆರಿಗೆ ಮಾಡಿಸಿದ್ದೇವೆ.

ಹಾಗೇ, ಹಾಸನದಿಂದ ವಾರಣಾಸಿಗೆ ತೆರಳುವ ಸಂದರ್ಭದಲ್ಲಿ ರೈಲಿನಲ್ಲಿ ತುಂಬಾ ಕ್ಲಿಷ್ಟಕರವಾದ ಪ್ರಕರಣ ಒಂದನ್ನು ಮೂವರು ವಿದ್ಯಾರ್ಥಿಗಳು, ತಮಗೆ ಇರುವ ಸೌಲಭ್ಯಗಳ ಮೂಲಕವೇ, ಹೆರಿಗೆ ಮಾಡಿಸಿದ್ದಾರೆ ಎಂದು ಎಸ್.ಡಿ.ಎಂ. ಆಯುರ್ವೇದ ಕಾಲೇಜಿನ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞೆ ಡಾ. ಗಾಯತ್ರಿ ತಿಳಿಸಿದರು.

**ಮಗುವಿಗೆ ಜನ್ಮ ನೀಡಿದ ಮಹಿಳೆ ಮನದಾಳ:** ನಾನು ಬೆಂಗಳೂರಿನಿಂದ ಬಿಹಾರಕ್ಕೆ ಪ್ರಯಾಣ ಬೆಳೆಸುತ್ತಿದ್ದೆ, ಈ ಸಂದರ್ಭದಲ್ಲಿ ನನಗೆ ಹೆರಿಗೆ ನೋವು ಕಾಣಿಸಿಕೊಂಡಿತು. ನಾವು ತುಂಬಾ ಬಡವರು. ಬೆಂಗಳೂರಿನ ಬಹುದೊಡ್ಡ ಆಸ್ಪತ್ರೆಯಲ್ಲಿ ನಮಗೆ ದಾಖಲಾಗಲು ಸಾಧ್ಯವಾಗದೇ, ನಮ್ಮ ಊರಿನ ಸರ್ಕಾರಿ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಿಕೊಳ್ಳಲು ನಾವು ರೈಲಿನ ಮೂಲಕ ಹೋಗುವಾಗ ನನಗೆ ಪ್ರಸವ ವೇದನೆ ಉಂಟಾಗಿತ್ತು.

## ಮಿನಿ ನ್ಯೂಸ್

# ಅಂಕೋಲಾ ನ್ಯಾಯಾಲಯ ಬೇರ್ಪಡಿಸದಂತೆ ಮನವಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಅಂಕೋಲಾ:**

ಅಂಕೋಲಾ ನ್ಯಾಯಾಲಯವನ್ನು ಧಾರವಾಡ ಹೈಕೋರ್ಟ್ ಪೀಠದ ವ್ಯಾಪ್ತಿಯಿಂದ ಬೇರ್ಪಡಿಸಿ, ಮಂಗಳೂರಿನಲ್ಲಿ ಪ್ರಸ್ತಾವಿತ ಹೈಕೋರ್ಟ್ ಪೀಠದ ವ್ಯಾಪ್ತಿಗೆ ಸೇರಿಸುವ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ಆಗ್ರಹಿಸಿ ಅಂಕೋಲಾ ವಕೀಲರ ಸಂಘದ ಪದಾಧಿಕಾರಿಗಳು ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿ ಹಾಗೂ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು. ಅಂಕೋಲಾ ನ್ಯಾಯಾಲಯದ ಮೇಲ್ಮನವಿ ಪ್ರಕರಣಗಳು ಧಾರವಾಡ ಹೈಕೋರ್ಟ್ ಪೀಠದ ವ್ಯಾಪ್ತಿಯಲ್ಲಿ ಇರುವುದರಿಂದ ಕಕ್ಷಿದಾರರು ಹಾಗೂ ವಕೀಲರಿಗೆ ಪ್ರಯಾಣ, ಸಮಯ, ವೆಚ್ಚದ ದೃಷ್ಟಿಯಿಂದ ಹೆಚ್ಚಿನ ಅನುಕೂಲ ಆಗಿದೆ. ಅಂಕೋಲಾ ನ್ಯಾಯಾಲಯವನ್ನು ಧಾರವಾಡ ಹೈಕೋರ್ಟ್ ಪೀಠದ ವ್ಯಾಪ್ತಿಯಲ್ಲಿಯೇ ಮುಂದುವರಿಸಬೇಕು ಎಂದು ಒತ್ತಾಯಿಸಿದ್ದಾರೆ. ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ವಿನಾಯಕ ನಾಯ್ಕ, ಗೌರವಾಧ್ಯಕ್ಷ ನಿತ್ಯಾನಂದ ಕವರಿ, ಕಾರ್ಯದರ್ಶಿ ರಾಮಚಂದ್ರ ಟಿ.ಗೌಡ, ಸಹ ಕಾರ್ಯದರ್ಶಿ ತೇಜಾ ಬಂಟ, ಖಜಾಂಚಿ ಪ್ರಕೃತಿ ನಾಯಕ, ಹಿರಿಯ ವಕೀಲರಾದ ಸುರೇಶ ಬಾನಾವಳಿಕರ್, ವಿ.ಟಿ.ನಾಯಕ, ವಿನೋದ ಶಾನಭಾಗ, ಪ್ರಸನ್ನ ಇದ್ದರು.

# ಸಹಕಾರ ಸಂಘದ ಅಧ್ಯಕ್ಷರಾಗಿ ಸುರೇಶ್ ಅವಿರೋಧ ಆಯ್ಕೆ

• **ಉದಯವಾಹಿನಿ ಶ್ರವಣಬೆಳಗೊಳ:**

ಹೋಬಳಿಯ ಕಾಂತರಾಜಪುರ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಎಚ್.ಆರ್.ಸುರೇಶ್‌ಅವಿರೋಧವಾಗಿ ಆಯ್ಕೆಯಾದರು. ಕೆ.ಬಿ.ರವೀಶ್ ಅವರ ರಾಜೀನಾಮೆಯಿಂದ ತೆರವಾಗಿದ್ದ

ಸ್ಥಾನಕ್ಕೆ ಹಾಲುಮತಿ ಘಟ್ಟದ ಎಚ್.ಆರ್.ಸುರೇಶ್ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಸಹಕಾರ ಇಲಾಖೆಯ ಅಧಿಕಾರಿ ವಿಜೇಂದ್ರ ಅವಿರೋಧ ಆಯ್ಕೆಯನ್ನು ಘೋಷಿಸಿದರು.

ಶಾಸಕ ಸಿ.ಎನ್.ಬಾಲಕೃಷ್ಣ ಅಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿ. ಮುಂಗಾರು ಹಂಗಾಮಿನ ಬೆಳೆಗಳನ್ನು ಬೆಳೆಯಲು ಅಗತ್ಯ ಹೊಂದಿರುವ ಎಲ್ಲಾ ರೈತ ಪಹಣಿದಾರರಿಗೆ ತೊಂದರೆಯಾಗದಂತೆ ಸಕಾಲದಲ್ಲಿ ಬೆಳೆ ಸಾಲ ವಿತರಿಸಲು ಸೂಚಿಸಿದರು. ಅಧ್ಯಕ್ಷರಾದ ಎಚ್.ಆರ್.ಸುರೇಶ್ ಮಾತನಾಡಿದರು. ಉಪಾಧ್ಯಕ್ಷ ಯು.ಸಿ.ನಿತಿನ್ ನಿರ್ದೇಶಕರಾದ ನಾರಾಯಣ, ಕೃಷ್ಣಪ್ಪ, ಸೋಮೇಗೌಡ, ಪುನೀತ್, ಕವಿತಾ, ಜಯಲಕ್ಷ್ಮಿ, ಯದುಕುಮಾರ್ ನಾಯಕ್, ನಂಜಪ್ಪ, ವನಜಾಕ್ಷಿ, ಇಸಿಒ ಪ್ರಮೀಳಾ, ಮೇಲ್ವಿಚಾರಕ ಮಧು, ಮುಖಂಡರಾದ ಎಚ್.ಎಂ.ಶಿವಣ್ಣ, ಹಿಮೇಶ್, ನಿಂಗಪ್ಪ, ದೇವರಾಜೇಗೌಡ, ಶ್ರೀರಂಗ, ಸಾಗರ್ ಗೌಡ, ನಾಗರಾಜ್, ರಾಮಚಂದ್ರ, ಕ್ಷೇತ್ರಪಾಲ, ಮಹೇಶ್, ರಾಜಣ್ಣ ಪಾಲ್ಗೊಂಡಿದ್ದರು.

# 300 ಚೀಲ ಪಡಿತರ ಅಕ್ಕಿ ಅಕ್ರಮ ಸಾಗಣೆ; ವಶಕ್ಕೆ

• **ಉದಯವಾಹಿನಿ ಜಗಳೂರು:**

ಪೊಲೀಸ್ ಇಲಾಖೆ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ತಾಲ್ಲೂಕಿನ ಕಾನನಕಟ್ಟೆ ಟೋಲ್ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಕ್ರಮವಾಗಿ 300 ಚೀಲ ಪಡಿತರ ಅಕ್ಕಿ ಸಾಗಿಸುತ್ತಿದ್ದ ಲಾರಿಯೊಂದನ್ನು ವಶಕ್ಕೆ ಪಡೆದಿದ್ದಾರೆ. ಪಡಿತರ ಅಕ್ಕಿ ಸಾಗಾಟ ಮಾಡುತ್ತಿರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿ ಶಿವಪ್ರಕಾಶ್, ಎಪಿಎಂಸಿ ಅಧಿಕಾರಿ ಮನು ಹಾಗೂ ಪೊಲೀಸ್ ಇನ್‌ಸ್ಪೆಕ್ಟರ್ ಸಿದ್ರಾಮಯ್ಯ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿದೆ. ಬೆಳಿಗ್ಗೆ ಹೆದ್ದಾರಿಯಲ್ಲಿ ಸಾಗುತ್ತಿದ್ದ ಕ್ಯಾಂಟರ್ ಲಾರಿಯನ್ನು ತಡೆದು ಪರಿಶೀಲಿಸಿದ್ದು, ಲಾರಿಯಲ್ಲಿ 300 ಚೀಲ ಪಡಿತರ ಅಕ್ಕಿ ತುಂಬಿದ ಚೀಲಗಳಿರುವುದು ಕಂಡುಬಂದಿದೆ. ಪಡಿತರ ಅಕ್ಕಿ ತುಂಬಿದ ಗೋಣಿ ಚೀಲಗಳ ಮೇಲೆ 'ಗವರ್ನಮೆಂಟ್ ಆಫ್ ಹರಿಯಾಣ' ಎಂದು ಇದೆ. ಪಡಿತರ ಅಕ್ಕಿ ಸಾಗಾಟದ ಬಗ್ಗೆ ಯಾವುದೇ ದಾಖಲೆಗಳು ಲಭ್ಯವಾಗಿಲ್ಲ. ಇಲ್ಲಿನ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜಲಾಶಯ ನಂಬಿ ಬೆಳೆ ಹಾಕಬೇಡಿ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಹಾಸನ:**

ಪ್ರಸ್ತುತ ಜಲಾಶಯಗಳ ಒಳಹರಿವು ಸಾಮಾನ್ಯಕ್ಕಿಂತ ಕಡಿಮೆಯಾಗಿದ್ದು, ಜಿಲ್ಲೆಯ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆ ಆಗದಂತೆ ರಾಷ್ಟ್ರೀಯ ಹಾಗೂ ರಾಜ್ಯ ಜಲನೀತಿಗಳ ಅನ್ವಯ ಜಲಾಶಯಗಳಲ್ಲಿ ಲಭ್ಯವಿರುವ ನೀರನ್ನು ಆದ್ಯತೆಯ ಮೇರೆಗೆ ಕುಡಿಯುವ ನೀರಿಗೆ ಮೀಸಲು ಇರಿಸಬೇಕಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದ್ದಾರೆ.

ಎಲ್-ನಿನೊ ಪರಿಣಾಮದಿಂದ ಮುಂಬರುವ ದಿನಗಳಲ್ಲಿ ಮಳೆಯ ಕೊರತೆ ಉಂಟಾಗುವ ಸಾಧ್ಯತೆ ಇರುವುದಾಗಿ ಹವಾಮಾನ ಇಲಾಖೆಯು ಸೂಚನೆ ನೀಡಿದೆ. ರಾಜ್ಯದ ಹಲವು ಕಡೆ ಬರ ಪರಿಸ್ಥಿತಿ ಉಂಟಾಗುವ ಸಾಧ್ಯತೆ ಇರುವುದರಿಂದ ಜಲಾಶಯ ನಂಬಿಕೊಂಡು ಯಾವ ರೈತರೂ ಬೆಳೆ ಹಾಕಬೇಡಿ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆ ಉಂಟಾಗದಂತೆ ಜಿಲ್ಲೆಯ ಜಲಾಶಯಗಳಲ್ಲಿನ ನೀರನ್ನು ಕುಡಿಯುವ ನೀರಿಗೆ ಕಾಯ್ದಿರಿಸಲು ನಿರ್ದೇಶನ ಇದೆ ಎಂದು ಹೇಳಿದ್ದಾರೆ.

ಜಿಲ್ಲೆಯ ರೈತರು ಜಲಾಶಯದ ನೀರನ್ನು ಅವಲಂಬಿಸಿರುವ ಬೆಳೆಗಳನ್ನು ಹಾಗೂ ಅಧಿಕ ನೀರು ಬೇಡುವ ಭತ್ತ, ಕಬ್ಬು, ಇತ್ಯಾದಿ ಬೆಳೆಗಳನ್ನು ಬೆಳೆಯದಂತೆ ಹಾಗೂ ಪರಿಸ್ಥಿತಿಯ ಗಂಭೀರತೆ ಅರ್ಥ ಮಾಡಿಕೊಂಡು ಕೃಷಿ ಇಲಾಖೆ ಅಧಿಕಾರಿಗಳು ನೀಡುವ ಸಲಹೆಯಂತೆ ಮಳೆ ಆಶ್ರಿತ ಬೆಳೆಗಳನ್ನು ಬೆಳೆಯುವಂತೆ ತಿಳಿಸಿದ್ದಾರೆ.

